ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಒಂಬತ್ತು ವರ್ಷಗಳ ಬಳಿಕ ಮೊದಲ ಬಾರಿ ಶ್ರೀಲಂಕಾದಲ್ಲಿ ಭಾರತ ತಂಡವು ಆಗಸ್ಟ್‌ನಲ್ಲಿ ಟೆಸ್ಟ್ ಸರಣಿ ಆಡಲಿದೆ.

03 ಜುಲೈ, 2026 ಶುಕ್ರವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ : 114 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಟಾಕಿಕ್ ಬರೋವರೆಗೂ ಕಾಯಬೇಡಿ » 2



ಯೋಗ, ಧ್ಯಾನ ರೂಢಿಸಿಕೊಂಡರೆ ಆರೋಗ್ಯ ವೃದ್ಧಿ » 3



ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಕ್ರಮ : ಹೆಚ್.ಡಿ.ಕೆ. » 4

## ಅಣೆಕಟ್ಟೆ ನೀರು ನಂಬಿ ಬಿತ್ತನೆ ಮಾಡಬೇಡಿ

### ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರ: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

• ಪ್ರಜೋದಯ ವರದಿ

**ಬೆಂಗಳೂರು:** ಮಳೆ ಕೊರತೆಯಿಂದ ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದ್ದು, ಬಹುತೇಕ ಅಣೆಕಟ್ಟೆಗಳಲ್ಲಿನ ಒಳಹರಿವು ಶೂನ್ಯಕ್ಕೆ ತಲುಪಿದೆ. ರೈತರು ಅಣೆಕಟ್ಟೆ ನೀರು ನಂಬಿಕೊಂಡು ಬಿತ್ತನೆ ಮಾಡಬಾರದೆಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೇಳಿದ್ದಾರೆ.

ವಿಧಾನಸೌಧದಲ್ಲಿ ಸಚಿವ ಸಂಪುಟ ಸಭೆ ಬಳಿಕ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ವರ್ಷಕ್ಕೆ ಹೋಲಿಸಿದರೆ ತುಂಗಭದ್ರಾ, ಘಟಪ್ರಭಾ, ಮಲಪ್ರಭಾ, ನಾರಾಯಣಪುರ, ವಾಣಿವಿಲಾಸ ಅಣೆಕಟ್ಟೆಗಳ ಒಳಹರಿವಿನ ಪ್ರಮಾಣ ಶೂನ್ಯವಾಗಿದೆ ಎಂದು ತಿಳಿಸಿದರು.

ಕಾವೇರಿ ನದಿ ಪಾತ್ರದಲ್ಲಿ ಮಳೆ ಪ್ರಮಾಣ ಕುಸಿದಿದೆ. ಕಳೆದ ವರ್ಷ ಈ ಸಮಯದಲ್ಲಿ ಹೇಮಾವತಿಯಲ್ಲಿ 80 ಅಡಿ ನೀರು ಇತ್ತು. ಈ ವರ್ಷ 40 ಅಡಿಗೆ ಕುಸಿದಿದೆ. ಕೆಆರ್‌ಎಸ್‌ನಲ್ಲಿ 100 ಅಡಿ ಇದ್ದ ನೀರಿನ ಪ್ರಮಾಣ ಈಗ 22 ಅಡಿಯಷ್ಟಿದೆ, ಕಬಿನಿಯಲ್ಲಿ 79 ಅಡಿ ಇತ್ತು, ಈಗ 26 ಅಡಿಯಷ್ಟು ನೀರು ಇದೆ. ಈ ಅಣೆಕಟ್ಟೆಗಳಲ್ಲಿ





ಒಳಹರಿವಿನ ಪ್ರಮಾಣ ಶೇ.20ರಷ್ಟು ಕುಸಿದಿದೆ. ಹೀಗಾಗಿ ಸಮಸ್ಯೆ ಹೆಚ್ಚುವ ಸಾಧ್ಯತೆ ಇದೆ ಎಂದು ವಿವರಿಸಿದರು.

ನೀರು ಬಿಡುವ ವಿಚಾರದಲ್ಲಿ ರೈತರು ಒತ್ತಡ ಹಾಕಬೇಡಿ. ಮುಂದಿನ ದಿನಗಳಲ್ಲಿ ಮಳೆ ಗಮನದಲ್ಲಿಟ್ಟುಕೊಂಡು ಬೆಳೆ ಹಾಕಿ. ಮಳೆ ಬಂದರೆ ನಾವು ನೀರನ್ನು ಒದಗಿಸಿಕೊಡುತ್ತೇವೆ. ಬರದ ಪರಿಸ್ಥಿತಿ ಎದುರಿಸಲು ಸಚಿವರಿಗೆ 2-3 ಜಿಲ್ಲೆಗಳ ಉಸ್ತುವಾರಿ ವಹಿಸಲಾಗಿದ್ದು, ನಾನು 4 ವಿಭಾಗಗಳಿಗೆ ತೆರಳಿ ಪರಿಶೀಲನೆ ಮಾಡುತ್ತೇನೆಂದು ತಿಳಿಸಿದರು.

ಪ್ರಧಾನ ಮಂತ್ರಿ ಈಗಾಗಲೇ ನೀರು ಹಾಗು ವಿದ್ಯುತ್ ವಿಚಾರವಾಗಿ ಎಚ್ಚರಿಕೆ ನೀಡಿದ್ದಾರೆ. ದೇಶದಲ್ಲೇ ಭೀಕರ ಬರಗಾಲ ಬರಲಿದೆ ಎಂದು ಕೇಂದ್ರ ಸರ್ಕಾರ ಸಂದೇಶ ನೀಡಿದೆ. ವಿದ್ಯುತ್ ವಿಚಾರವಾಗಿ ಇಂಧನ ಇಲಾಖೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದೇನೆ. ನಾವು ಈ ಸಂದರ್ಭದಲ್ಲಿ ಎಚ್ಚರಿಕೆಯಿಂದ ಇರಬೇಕು. ಮೇವು ಹಾಗು ಕುಡಿಯುವ ನೀರಿನ ವಿಚಾರವಾಗಿ ಜಿಲ್ಲಾ ಸಚಿವರಿಗೆ ಪ್ರವಾಸ ಕೈಗೊಳ್ಳುವಂತೆ ಸೂಚನೆ ನೀಡಿದ್ದೇನೆ. ತುರ್ತಾಗಿ ಕೊಳವೆ ಬಾವಿ ಕೊರೆಯಲು ಸೂಚಿಸಲಾಗಿದೆ ಎಂದು ಹೇಳಿದರು.

### ಕುಡಿಯುವ ನೀರಿಗೆ 117 ಕೋ.ರೂ. ಬಿಡುಗಡೆ

**ಬೆಂಗಳೂರು:** ಎಲ್‌ನಿನೋ ಪ್ರಭಾವದಿಂದ ರಾಜ್ಯದಲ್ಲಿ ಮಳೆಯ ಕೊರತೆ ಆಗಿದ್ದು, ಗ್ರಾಮಗಳಲ್ಲಿ ನೀರಿನ ಸಮಸ್ಯೆ ಎದುರಾಗದಂತೆ ಮುಂಗಡವಾಗಿ 117 ಕೋ. ರೂ. ಬಿಡುಗಡೆ ಮಾಡಲಾಗಿದೆ, ನೀರು ಪೂರೈಕೆಗೆ ಹಣದ ಕೊರತೆ ಇಲ್ಲವೆಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ.

ವಿಕಾಸಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಸುಮಾರು 85 ಕೋ.ರೂ.ಗಳಿಗೆ ಕ್ರಿಯಾ ಯೋಜನೆ ರೂಪಿಸಲಾಗಿದೆ. 30 ಕೋ.ರೂ. ವೆಚ್ಚ ಮಾಡಲಾಗಿದ್ದು, ನೀರಿನ ಸಮಸ್ಯೆ ಇರುವ ಗ್ರಾಮಗಳಲ್ಲಿ ಕುಡಿಯುವ ನೀರು ಪೂರೈಕೆಗೆ ತೊಂದರೆ ಆಗದಂತೆ ಕ್ರಮ ವಹಿಸಲಾಗಿದೆ ಎಂದರು.

ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾದರೆ 24 ಗಂಟೆಗಳ ಒಳಗಾಗಿ ಪರಿಹರಿಸು



ವಂತೆ ಸೂಚಿಸಲಾಗಿದೆ. ಖಾಸಗಿ ತೆರೆದ ಬಾವಿ, ಬೋರ್ ವೆಲ್ ಗಳಿಂದ ನೀರು ಪಡೆದು ಟ್ಯಾಂಕರ್ ಮೂಲಕ ಸರಬರಾಜು ಮಾಡಲಾಗುತ್ತಿದೆ. ತೀರಾ ಅಗತ್ಯಬಿದ್ದ ಸಂದರ್ಭದಲ್ಲಿ ಮಾತ್ರ ಕೊಳವೆ ಬಾವಿ ಕೊರೆಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದರು.

ಜಲಾಶಯಗಳಲ್ಲಿ ನೀರಿನ ಮಟ್ಟ ಕುಸಿಯುತ್ತಿದೆ. ಕಳೆದ 2-3 ದಿನದಿಂದ ಮಳೆ ಆಗುತ್ತಿದ್ದು, ಕೆಲವು ಜಲಾಶಯಗಳಿಗೆ ನೀರು ಬರುತ್ತಿದೆ. ಈ ಸಂಕಷ್ಟದ ಸಮಯದಲ್ಲಿ ಜೀವಜಲವನ್ನು ಹಿತಮಿತವಾಗಿ ಜನರು ಬಳಸಬೇಕು. ಪೋಲು ಮಾಡಬಾರದೆಂದು ಮನವಿ ಮಾಡಿದ ಅವರು, ಪಂಚಾಯಿತಿಗಳು ನೀರು ಸೋರಿಕೆ ಆಗದಂತೆ ಎಚ್ಚರ ವಹಿಸಬೇಕೆಂದು ತಿಳಿಸಿದರು.

## ಗೂಡಂಗಡಿ, ಬೀದಿ ಬದಿ ವ್ಯಾಪಾರಿಗಳ ತೆರವು

### ಮಹಾನಗರ ಪಾಲಿಕೆಯಿಂದ ಕಾರ್ಯಾಚರಣೆಗೆ ವಿರೋಧ

• ಪ್ರಜೋದಯ ವರದಿ

**ಹಾಸನ :** ನಗರದ ರೈಲ್ವೆ ನಿಲ್ದಾಣದ ಹಾಗು ಜಿಲ್ಲಾ ಸರ್ಕಾರಿ ಆಸ್ಪತ್ರೆ ಬಳಿ ಅನಧಿಕೃತವಾಗಿ ನಿರ್ಮಿಸಿಕೊಂಡಿದ್ದ ಗೂಡಂಗಡಿ, ತಳ್ಳುವಗಾಡಿ ಹಾಗು ಬೀದಿ ಬದಿ ವ್ಯಾಪಾರ ಮಳಿಗೆಗಳ ತೆರವು ಕಾರ್ಯಾಚರಣೆ ನಡೆಸಲಾಯಿತು.

ಮಹಾನಗರ ಪಾಲಿಕೆ ಆಯುಕ್ತ ಕೃಷ್ಣಮೂರ್ತಿ ಅವರ ನೇತೃತ್ವದಲ್ಲಿ ಗುರುವಾರ ಬೆಳಿಗ್ಗೆ ಜೆಸಿಬಿ ಮೂಲಕ ತೆರವು ಕಾರ್ಯಾಚರಣೆ ವೇಳೆ ಕೆಲ ವ್ಯಾಪಾರಿಗಳು ಹಾಗು ಆಟೋ ಚಾಲಕರು ತೀವ್ರ ವಿರೋಧ ವ್ಯಕ್ತಪಡಿಸಿದರು. ಬೆಳಿಗ್ಗೆ ರೈಲ್ವೆ ನಿಲ್ದಾಣ ರಸ್ತೆ ಮತ್ತು ಜಿಲ್ಲಾಸ್ಪತ್ರೆ ಎದುರಿನ ಪಾದಚಾರಿ ಮಾರ್ಗವನ್ನು ಅತಿಕ್ರಮಿಸಿಕೊಂಡಿದ್ದ ತಾತ್ಕಾಲಿಕ ಗೂಡಂಗಡಿಗಳನ್ನು ತೆರವುಗೊಳಿಸಲಾಯಿತು. ಈ ವೇಳೆ ಅಧಿಕಾರಿಗಳೊಂದಿಗೆ ವಾಗ್ವಾದ ನಡೆಸಿದ ವ್ಯಾಪಾರಿಗಳು, ನಗರದ ಅನೇಕ ಕಡೆಗಳಲ್ಲಿ ಬೀದಿ ಬದಿ ಅಂಗಡಿಗಳಿದ್ದು, ಆಯ್ದ ಕೆಲವರ ಅಂಗಡಿಗಳನ್ನು ಮಾತ್ರ ತೆರವುಗೊಳಿಸುವುದು ನ್ಯಾಯ ಸಮ್ಮತವಲ್ಲ. ಪಾಲಿಕೆಗೆ ಪ್ರತಿದಿನ ಶುಲ್ಕ ಪಾವತಿಸುತ್ತಿದ್ದರೂ



> **ಸಾರ್ವಜನಿಕರ ಸುರಕ್ಷತೆ, ಪಾದಚಾರಿಗಳ ಅನುಕೂಲ, ನಗರದ ಸ್ವಚ್ಛತೆ ಕಾಪಾಡುವುದು ಪಾಲಿಕೆಯ ಪ್ರಮುಖ ಹೊಣೆ. ಗೂಡಂಗಡಿಗಳನ್ನು ಎಲ್ಲೆಂದರಲ್ಲಿ ನಿರ್ಮಿಸಿಕೊಳ್ಳಲು ಅವಕಾಶ ನೀಡುವುದಿಲ್ಲ**
> **- ಕೃಷ್ಣಮೂರ್ತಿ, ಮಹಾನಗರ**

ಲಿಖಿತ ನೋಟೀಸ್ ನೀಡದೆ ಏಕಾಏಕಿ ತೆರವು ಕಾರ್ಯಾಚರಣೆ ನಡೆಸಿರುವುದು ಸರಿಯಾದ ಕ್ರಮವಲ್ಲ. ಬಡ ಕುಟುಂಬಗಳ ಜೀವನೋಪಾಯಕ್ಕೆ ಈ ಅಂಗಡಿಗಳೇ ಆಧಾರವಾಗಿದ್ದು, ಪರ್ಯಾಯ ವ್ಯವಸ್ಥೆ ಕಲ್ಪಿಸದೆ ತೆರವುಗೊಳಿಸಿರುವುದು ಸಂಕಷ್ಟಕ್ಕೆ ದೂಡಿದೆ ಎಂದು ಆರೋಪಿಸಿದರು.

ಈ ಕುರಿತು ಮಾತನಾಡಿದ ಪಾಲಿಕೆ ಆಯುಕ್ತ ಕೃಷ್ಣಮೂರ್ತಿ ಅವರು, ರೈಲ್ವೆ ನಿಲ್ದಾಣ ರಸ್ತೆ ಹಾಗು ಜಿಲ್ಲಾಸ್ಪತ್ರೆ ಎದುರಿನ ಪಾದಚಾರಿ ಮಾರ್ಗಗಳನ್ನು ಸಾರ್ವಜನಿಕರ ಓಡಾಟಕ್ಕೆ ಮುಕ್ತಗೊಳಿಸುವ ಉದ್ದೇಶದಿಂದ ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತವಾಗಿ ಗೂಡಂಗಡಿ ನಿರ್ಮಿಸಿ ವ್ಯಾಪಾರ ನಡೆಸುವುದು

» ನಾಲ್ಕನೇ ಪುಟದಲ್ಲಿ

## ಮಲೆನಾಡು ಭಾಗದಲ್ಲಿ ಮಳೆ ಬಿರುಸು

■ ಹೊಂಗಡಹಳ್ಳದಲ್ಲಿ 82 ಮಿ.ಮೀ. ಮಳೆ ದಾಖಲು

• ಪ್ರಜೋದಯ ವರದಿ

**ಹಾಸನ:** ಮಲೆನಾಡು ಭಾಗದಲ್ಲಿ ಕಳೆದ ನಾಲ್ಕೈದು ದಿನಗಳಿಂದ ನಿರಂತರವಾಗಿ ಮಳೆಯಾಗುತ್ತಿದೆ. ಆದರೆ, ಬಯಲುನಾಡಿನ ಬಹುತೇಕ ಭಾಗಗಳಲ್ಲಿ ಮೋಡ ಕವಿದ ವಾತಾವರಣವೇ ಮುಂದುವರೆದಿದೆ.

ಸಕಲೇಶಪುರ ತಾಲ್ಲೂಕಿನ ಹೊಂಗಡಹಳ್ಳ ಗ್ರಾಮದಲ್ಲಿ ಕಳೆದ 24 ಗಂಟೆಗಳ ಅವಧಿಯಲ್ಲಿ 82 ಮಿ.ಮೀ. ಮಳೆ ದಾಖಲಾಗಿದ್ದು, ಜಿಲ್ಲೆಯಲ್ಲೇ ಅತೀ ಹೆಚ್ಚು ಮಳೆಯಾಗಿದೆ. ಪಶ್ಚಿಮ ಘಟ್ಟ ಪ್ರದೇಶಕ್ಕೆ ಹೊಂದಿಕೊಂಡಿರುವ ಹೆತ್ತೂರು, ಯಸಳೂರು, ವಣಗೂರು, ಬಿಸ್ಲೆ, ಹಾನುಬಾಳು ಹಾಗು ಸುತ್ತಮುತ್ತಲಿನ ಪ್ರದೇಶಗಳಲ್ಲಿ



ಮಳೆಯಾಗಿದ್ದು, ಹಳ್ಳ- ಕೊಳ್ಳಗಳಲ್ಲಿ ನೀರಿನ ಹರಿವು ಹೆಚ್ಚಾಗಿದೆ.

ನಿರಂತರ ಮಳೆಯಿಂದ ಭತ್ತದ ನಾಟಿಗೆ ರೈತರು ಪೂರ್ವಸಿದ್ಧತಾ ಕಾರ್ಯಗಳನ್ನು ಚುರುಕುಗೊಳಿಸಿದ್ದಾರೆ. ಉಳುಮೆ, ಗದ್ದೆ ಸಮತಟ್ಟು ಮಾಡುವ ಕೆಲಸ, ನಾಟಿ ಗದ್ದೆಗಳ ಸಿದ್ಧತೆ ಹಾಗು ಉಳುಮೆ ಕಾರ್ಯಗಳು ವೇಗ ಪಡೆದಿವೆ. ಮುಂಗಾರು ಆರಂಭದಲ್ಲಿ ಮಳೆ ಕೊರತೆಯಿಂದ ಕಂಗಾಲಾಗಿದ್ದ ರೈತರಲ್ಲಿ ಇದೀಗ ಆಶಾಭಾವನೆ ಮೂಡಿದೆ. ಹವಾಮಾನ ಇಲಾಖೆ ಮುಂದಿನ ಕೆಲವು ದಿನಗಳ ಕಾಲ ಮಲೆನಾಡು ಭಾಗದಲ್ಲಿ ಮಳೆಯಾಗುವ ಸಾಧ್ಯತೆ ಇರುವುದಾಗಿ

» ನಾಲ್ಕನೇ ಪುಟದಲ್ಲಿ

### ವಿಪತ್ತು ನಿರ್ವಹಣಾ ಸಭೆಯಲ್ಲಿ ಸಂಸದ ಶ್ರೇಯಸ್ ಪಟೇಲ್ ಅಧಿಕಾರಿಗಳಿಗೆ ಸೂಚನೆ

## ಮಳೆ ಕೊರತೆ: ಕುಡಿಯುವ ನೀರಿಗೆ ಸಮಸ್ಯೆಯಾಗದಿರಲಿ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ ಮುಂಗಾರು ಮಳೆ ಕೊರತೆ ಹಿನ್ನಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಸಂಸದ ಶ್ರೇಯಸ್ ಪಟೇಲ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಗುರುವಾರ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್ ಹಾಗು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಸಭೆಯಲ್ಲಿ ಮಾತನಾಡಿದ ಅವರು,





ಜಿಲ್ಲೆಯಲ್ಲಿ ಇದುವರೆಗೆ ಶೇ.32ರಷ್ಟು ಮಳೆ ಕೊರತೆಯಾಗಿದೆ. ಜೂನ್ ತಿಂಗಳಲ್ಲಿ ನಿರೀಕ್ಷಿತ ಪ್ರಮಾಣದ ಮಳೆ ಸುರಿಯದ ಕಾರಣ ಬಿತ್ತನೆ ಕಾರ್ಯಕ್ಕೂ ಹಿನ್ನಡೆಯಾಗಿದೆ ಎಂದು ತಿಳಿಸಿದರು.

ಹೇಮಾವತಿ ಜಲಾಶಯದಲ್ಲಿ ಸದ್ಯ ಬಳಕೆಗೆ ಕೇವಲ 10 ಟಿಎಂಸಿ ನೀರು ಮಾತ್ರ ಲಭ್ಯವಿದ್ದು, ಹಾಸನ, ಅರಕಲಗೂಡು, ಹೊಳೆನರಸೀಪುರ ಹಾಗು ಆಲೂರು ಭಾಗಗಳ ಕುಡಿಯುವ ನೀರಿನ ಪೂರೈಕೆಗೆ ಇದೇ ಜಲಾಶಯ ಪ್ರಮುಖ ಮೂಲವಾಗಿದೆ. ಪ್ರಸ್ತುತ ತಿಂಗಳಿಗೆ ಸುಮಾರು 2 ರಿಂದ 2.5 ಟಿಎಂಸಿ ನೀರು ಕುಡಿಯುವ ಉದ್ದೇಶಕ್ಕೆ ಅಗತ್ಯವಿದ್ದು, ಈಗ ಲಭ್ಯವಿರುವ ನೀರು ಇನ್ನೂ ಮೂರು ತಿಂಗಳ ಅವಶ್ಯಕತೆಯನ್ನು ಪೂರೈಸುವಷ್ಟು ಮಾತ್ರ ಇದೆ. ಜಿಲ್ಲೆಯ 35 ಗ್ರಾಮಗಳಲ್ಲಿ ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆ ಪಡೆದು ಕುಡಿಯುವ ನೀರು ಪೂರೈಸಲಾಗುತ್ತಿದೆ. ಜುಲೈ ತಿಂಗಳಲ್ಲಿ ಉತ್ತಮ ಮಳೆಯಾಗುವ ನಿರೀಕ್ಷೆ ಇದ್ದು, ಸಮರ್ಪಕವಾಗಿ ಮಳೆಯಾದರೆ ನೀರಿನ ಸಮಸ್ಯೆ ನಿವಾರಣೆಯಾಗುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಪ್ರತಿಕ್ರಿಯಿಸಿದ ಸಂಸದರು, ಯಾವುದೇ ಗ್ರಾಮ ಅಥವಾ ನಗರ ಪ್ರದೇಶದಲ್ಲಿ ಸಾರ್ವಜನಿಕರು ಕುಡಿ

» ನಾಲ್ಕನೇ ಪುಟದಲ್ಲಿ

### ವಿಪತ್ತು ನಿರ್ವಹಣೆಗೆ ಸನ್ನದ್ಧರಾಗಿ

**ಮಳೆ ಕೊರತೆಯಿಂದ ಕೃಷಿ ಹಾಗು ಗ್ರಾಮೀಣ ಜೀವನದ ಮೇಲೆ ಉಂಟಾಗಬಹುದಾದ ಪರಿಣಾಮವನ್ನು ಗಮನದಲ್ಲಿಟ್ಟುಕೊಂಡು ಜಿಲ್ಲಾ ವಿಪತ್ತು ನಿರ್ವಹಣಾ ವ್ಯವಸ್ಥೆ ಸಂಪೂರ್ಣ ಸನ್ನದ್ಧ ಸ್ಥಿತಿಯಲ್ಲಿರಿಸಬೇಕು. ತುರ್ತು ಪರಿಸ್ಥಿತಿ ಎದುರಾದರೆ ಸಾರ್ವಜನಿಕರಿಗೆ ತಕ್ಷಣ ಸ್ಪಂದಿಸುವ ವ್ಯವಸ್ಥೆ, ಇಲಾಖೆಗಳ ನಡುವಿನ ಸಮನ್ವಯ ಹಾಗು ಅಗತ್ಯ ಸಂಪನ್ಮೂಲಗಳ ಲಭ್ಯತೆ ಖಚಿತ ಪಡಿಸಿಕೊಳ್ಳುವಂತೆ ಸೂಚಿಸಿದರು.**

## ಜು.3 - 4 ರಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಭೇಟಿ

• ಪ್ರಜೋದಯ ವರದಿ

ಹಾಸನ : ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ನವೀನ್ ರಾಜ್ ಸಿಂಗ್ ಅವರು ಜು.03 ಮತ್ತು 04 ರಂದು ಜಿಲ್ಲೆಗೆ ಭೇಟಿ ನೀಡಲಿದ್ದಾರೆ.

ಜು.3 ರಂದು ಸಂಜೆ 4 ಗಂಟೆಯಿಂದ 6 ಗಂಟೆಯವರೆಗೆ ಜಿಲ್ಲೆಯ ಕ್ರೀಡಾಂಗಣ ಮತ್ತು ವಸತಿ ನಿಲಯಗಳ ಪರಿವೀಕ್ಷಣೆ ಹಾಗೂ ಜು.4 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ನಡೆಯುವ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಲಿದ್ದಾರೆ.

## ಎಟಿಎಂನಲ್ಲಿ ಹಣ ಕಳವಿಗೆ ಯತ್ನ: ಇಬ್ಬರ ಬಂಧನ

• ಪ್ರಜೋದಯ ವರದಿ

**ಅರಸೀಕೆರೆ:** ನಗರದ ವಾಚನಾಲಯ ರಸ್ತೆ ಹಾರನಹಳ್ಳಿ ರಾಮಸ್ವಾಮಿ ಸಮುದಾಯ ಭವನದ ವಾಣಿಜ್ಯ ಸಂಕೀರ್ಣದಲ್ಲಿರುವ ಕರ್ನಾಟಕ ಬ್ಯಾಂಕ್‌ನ ಎಟಿಎಂನಲ್ಲಿ ಹಣ ಕಳವು ಮಾಡಲು ಯತ್ನಿಸಿದ್ದ ಇಬ್ಬರು ಆರೋಪಿಗಳನ್ನು ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ನಗರದ ಅವೇಜ್ ಖಾನ್, ಸುಹಿಲ್ ಬಂಧಿತ ಆರೋಪಿಗಳು.



ಬುಧವಾರ ರಾತ್ರಿ ಸುಮಾರು 11 ಗಂಟೆಗೆ ಆರೋಪಿಗಳು ಎಟಿಎಂ ಯಂತ್ರವನ್ನು ಹಾನಿಗೊಳಿಸಿ ಹಣ ದೋಚಲು ಯತ್ನಿಸಿದ್ದಾರೆ. ಈ ವೇಳೆ ಎಟಿಎಂನ ರಿಮೋಟ್ ಸಾಧನ ಹಾಗು ಸಿಸಿಟಿವಿ ಕ್ಯಾಮರಾವನ್ನು ಧ್ವಂಸಗೊಳಿಸಿರುವ ಬಗ್ಗೆ ಎಟಿಎಂಗೆ ಹಣ ತುಂಬುವ ಗುತ್ತಿಗೆ ಸಂಸ್ಥೆ ಎನ್‌ಸಿಆರ್ ಕಾರ್ಪೋರೇಷನ್ ಇಂಡಿಯಾ ಪ್ರೈವೇಟ್ ಲಿಮಿಟೆಡ್‌ನ ಹೈದರಾಬಾದ್ ನಿಯಂತ್ರಣ ಕೇಂದ್ರಕ್ಕೆ ತಕ್ಷಣ ಎಚ್ಚರಿಕೆ ಸಂದೇಶ ರವಾನೆಯಾಗಿದೆ.

ಕಂಪನಿಯ ಪ್ರತಿನಿಧಿ ಕೂಡಲೇ ನಗರ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ ಹಿನ್ನಲ್ಲೆಯಲ್ಲಿ ಪೊಲೀಸರು ಸ್ಥಳಕ್ಕೆ ಧಾವಿಸಿ ಕಾರ್ಯಾಚರಣೆ ನಡೆಸಿದರು. ಘಟನಾ ಸ್ಥಳದಲ್ಲೇ ಒಬ್ಬ ಆರೋಪಿಯನ್ನು ವಶಕ್ಕೆ ಪಡೆದಿದ್ದು, ಪರಾರಿಯಾಗಿದ್ದ ಮತ್ತೊಬ್ಬ ಆರೋಪಿಯನ್ನು ಗುರುವಾರ ಬಂಧಿಸಿ ವಿಚಾರಣೆ ನಡೆಸಿದ ಬಳಿಕ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಕಾರ್ಯಾಚರಣೆಯಲ್ಲಿ ಪಿಎಸ್‌ಐ ದಿಲೀಪ್ ಕುಮಾರ್, ಪೊಲೀಸ್ ಅಧಿಕಾರಿಗಳಾದ ಶಿವಾನಂದ, ಎಸ್‌ಐ ಶಿವಲಿಂಗಪ್ಪ ಮೋಹನ್ ನಾಯಕ್ ಹಾಗು ಸಿಬ್ಬಂದಿ ಇದ್ದರು.

## ನಾಳೆ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಅಧ್ಯಕ್ಷರ ಜಿಲ್ಲಾ ಪ್ರವಾಸ

**ಹಾಸನ :** ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷ ಪಿ.ರಘು ಅವರು ಜು. 4 ರಂದು ಜಿಲ್ಲೆಯಲ್ಲಿ ಪ್ರವಾಸ ಮಾಡಲಿದ್ದಾರೆ.

ಅಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲೆಯ ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆ ಗಳಲ್ಲಿ ಕೆಲಸ ನಿರ್ವ ಹಿಸುತ್ತಿರುವ ಮತ್ತು ಇತರೆ ಸಂಸ್ಥೆಗಳ ಸ್ವಚ್ಛತಾ ಕಾರ್ಮಿಕ ರೊಂ ದಿಗೆ ನೇರ ಸಂವಾದ ಹಾಗೂ ಮಧ್ಯಾಹ್ನ 12.30 ಕ್ಕೆ ನಗರ ಸ್ಥಳೀಯ ಸಂಸ್ಥೆ, ಗ್ರಾಮ ಪಂಚಾಯಿತಿಗಳು ಮತ್ತು ಇತರೆ ಸಂಸ್ಥೆ ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಚ್ಛತಾ ಕಾರ್ಮಿಕರು- ಪೌರ ಕಾಮಿ ಕರಿಗೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ.

## ತಡೆಗೋಡೆ ಕುಸಿದು ಮನೆಗೆ ಹಾನಿ

• ಪ್ರಜೋದಯ ವರದಿ

**ಸಕಲೇಶಪುರ:** ನಿರಂತರ ಮಳೆಗೆ ತಡೆಗೋಡೆ ಕುಸಿದು ಮನೆಗೆ ಹಾನಿಯಾಗಿರುವ ಘಟನೆ ತಾಲ್ಲೂಕಿನ ಬ್ಯಾಕರವಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುಣಿಗಲ್ ಗ್ರಾಮದಲ್ಲಿ ನಡೆದಿದೆ.

ಶೇಖರ್ ಎಂಬುವವರಿಗೆ ಸೇರಿದ ಮನೆ ಕುಸಿಯುವ ಭೀತಿ ಎದುರಾಗಿದ್ದು, 2024 ಹಾಗು 2025ನೇ ಸಾಲಿನಲ್ಲಿ ಸುರಿದ ಭಾರೀ ಮಳೆಯಿಂದ ಇದೇ ಮನೆಗೆ ಹಾನಿಯಾಗಿತ್ತು. ಈ ಕುರಿತು ಬ್ಯಾಕರವಳ್ಳಿ ಗ್ರಾಮ ಪಂಚಾಯಿತಿ ಹಾಗು ಸಂಬಂಧಪಟ್ಟ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿ ಪರಿಹಾರ ಕೋರಲಾಗಿದ್ದರೂ,



ಈವರೆಗೆ ನೆರವು ದೊರೆತಿಲ್ಲವೆಂದು ಕುಟುಂಬದವರು ಆರೋಪಿಸಿದ್ದಾರೆ.

ಈ ಬಾರಿ ಮತ್ತೆ ಸುರಿದ ಮಳೆಯಿಂದ ಮನೆಯ ತಡೆಗೋಡೆ ಕುಸಿದಿದ್ದು, ಮನೆಯ ಗೋಡೆಗಳಲ್ಲಿ ಬಿರುಕುಗಳು ಕಾಣಿಸಿಕೊಂಡಿವೆ. ಕುಟುಂಬದ ಸದಸ್ಯರು ಆತಂಕದಲ್ಲಿ ದಿನ ಕಳೆಯುವಂತಾಗಿದೆ. ಮುಂದಿನ ದಿನಗಳಲ್ಲಿ ಮಳೆ ಮುಂದುವರಿದರೆ ಮನೆ ಸಂಪೂರ್ಣ ಕುಸಿಯುವ ಅಪಾಯವಿದೆ ಎಂದು ತಿಳಿಸಿದ್ದಾರೆ.

ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಅಪಾಯದಲ್ಲಿರುವ ಕುಟುಂಬವನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸುವುದರೊಂದಿಗೆ ತುರ್ತು ಪರಿಹಾರ ಹಾಗೂ ಮನೆ ದುರಸ್ತಿಗೆ ಅಗತ್ಯ ನೆರವು ಒದಗಿಸಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಮಳೆಗಾಲ ಆರಂಭವಾಗುತ್ತಿದ್ದಂತೆ ಗ್ರಾಮೀಣ ಭಾಗಗಳಲ್ಲಿ ದುರ್ಬಲ ಮನೆಗಳಿಗೆ ಅಪಾಯ ಹೆಚ್ಚುತ್ತಿರುವ ಹಿನ್ನಲೆಯಲ್ಲಿ, ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಸಂಭವನೀಯ ಅನಾಹುತಗಳನ್ನು ತಪ್ಪಿಸಬೇಕೆಂಬ ಆಗ್ರಹವೂ ಕೇಳಿ ಬಂದಿದೆ.

## ಹೋಬಳಿ ಮಟ್ಟದ ಜನಸ್ಪಂದನಾ ಸಭೆ

• ಪ್ರಜೋದಯ ವರದಿ

**ಹಾಸನ :** ಜಿಲ್ಲೆಯ ಎಲ್ಲಾ ರೈತ ವರ್ಗದವರಿಗೆ, ಸಾರ್ವಜನಿಕರಿಗೆ, ಗ್ರಾಮೀಣ ಜನರಿಗೆ ಸಾಮಾಜಿಕ, ಶೈಕ್ಷಣಿಕ, ವಾಣಿಜ್ಯ ಹಾಗೂ ಕೃಷಿ ಚಟುವಟಿಕೆಗಳಿಗೆ ವಿವಿಧ ಇಲಾಖೆಗಳಲ್ಲಿ ದೊರೆಯ ಬೇಕಾದ ಸೌಲಭ್ಯಗಳು ನಿಗದಿತ ಅವಧಿಯೊಳಗೆ ದೊರೆಯದಿದ್ದಾಗ ತಮ್ಮ ಅಹವಾಲು ದಾಖಲಿಸಲು ಸರ್ಕಾರವು ಏಕೀಕೃತ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಿದೆ ಎಂದು ಜಿಲ್ಲಾಧಿಕಾರಿ ಅವರು ತಿಳಿಸಿದ್ದಾರೆ.

ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಸಲ್ಲಿಸಲು ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಒಂದೆಡೆ ಇರುವುದರಿಂದ ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ನೇರವಾಗಿ ತಮ್ಮ ಅಹವಾಲುಗಳನ್ನು ದಾಖಲಿಸಲು ಹೋಬಳಿ ಮಟ್ಟದ ನಾಡ ಕಚೇರಿಯ ಕೇಂದ್ರ ಸ್ಥಾನದಲ್ಲಿ ಹಾಸನ ತಾಲ್ಲೂಕು, ದುದ್ದ ಹೋಬಳಿ, 2026 ರ ಜು.18, ಬೇಲೂರು ತಾಲ್ಲೂಕು, ಹಳೇಬೀಡು ಹೋಬಳಿ, ಆಗಸ್ಟ್ ಆ.17, ಸಕಲೇಶಪುರ ತಾಲ್ಲೂಕು, ಹೆತ್ತೂರು ಹೋಬಳಿಯಲ್ಲಿ ಸೆ.19, ಅರಕಲಗೂಡು ತಾಲ್ಲೂಕು, ಕೊಣನೂರು ಹೋಬಳಿ, ಅ.17, ಚನ್ನರಾಯಪಟ್ಟಣ ತಾಲ್ಲೂಕು, ಶ್ರವಣಬೆಳಗೊಳ ಹೋಬಳಿ, ನ.21, ಅರಸೀಕೆರೆ ತಾಲ್ಲೂಕು, ಬಾಣಾವರ ಹೋಬಳಿ, ಡಿ.19 ರಂದು ಆಲೂರು ತಾಲ್ಲೂಕು, ಪಾಳ್ಯ ಹೋಬಳಿಯಲ್ಲಿ 2027 ರ ಜ.16 ರಂದು ಹೊಳೆನರಸೀಪುರ ತಾಲ್ಲೂಕು, ಹಳ್ಳಿಮೈಸೂರು ಹೋಬಳಿ, ಫೆ.20 ರಂದು ಜನ ಸ್ಪಂದನಾ ಕಾರ್ಯಕ್ರಮ ಆಯೋಜಿಸಿದ್ದು, ಸದರಿ ದಿನದಂದು ಖುದ್ದು ಹಾಜರಾಗಿ ತಮ್ಮ ಅಹವಾಲನ್ನು ಸಲ್ಲಿಸಲು ತಿಳಿಸಿದ್ದಾರೆ.

## ಉದ್ದಿಮೆ ಪರವಾನಿಗೆ ಪಡೆಯಲು ಸೂಚನೆ

ಹಾಸನ : ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ರೀತಿಯ ವಾಣಿಜ್ಯ ಉದ್ದಿಮೆದಾರರು ಹಾಗೂ ಸಾರ್ವಜನಿಕರು ಮಹಾನಗರ ಪಾಲಿಕೆಯಿಂದ ಪಡೆಯುವ ಉದ್ದಿಮೆ ಪರವಾನಿಗೆ ಮತ್ತು ಜನನ ಮತ್ತು ಮರಣಗಳ ಪ್ರಮಾಣ ಪತ್ರವನ್ನು ಸಾರ್ವಜನಿಕರು ಮಹಾನಗರ ಪಾಲಿಕೆಯ ಆರೋಗ್ಯ ಶಾಖೆಯಲ್ಲಿ ನೇರವಾಗಿ ಸಂಪರ್ಕಿಸಿ ಅರ್ಜಿಯನ್ನು ನೀಡಿ ನಿಗದಿತ ಶುಲ್ಕವನ್ನು ಪಾವತಿಸಿ ಪಡೆದುಕೊಳ್ಳಬಹುದೆಂದು ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ. ಮೂರನೇ ವ್ಯಕ್ತಿಯ ಆಮಿಷಕ್ಕೆ ಒಳಗಾಗಿ ಹೆಚ್ಚು ಶುಲ್ಕವನ್ನು ಪಾವತಿಸುವ ಮುಖಾಂತರ ಪರವಾನಿಗೆ ಹಾಗೂ ಜನನ ಮತ್ತು ಮರಣ ಪತ್ರಗಳನ್ನು ಪಡೆಯಬಾರದಾಗಿ ತಿಳಿಸಿದ್ದಾರೆ.

### 494.14 ಎಕರೆ ಭೂಸ್ವಾಧೀನಕ್ಕೆ ನೋಟೀಸ್ | ವಸತಿ ಯೋಜನೆಗೆ ಕೃಷಿ ಭೂಮಿ ನೀಡದಿರಲು ಹೂವಿನಹಳ್ಳಿ ಗ್ರಾಮಸ್ಥರ ನಿರ್ಧಾರ

## ಬಿಡದಿ ಮಾದರಿ ಹೋರಾಟಕ್ಕೆ ಹಾಸನದ ರೈತರು ಸಜ್ಜು

-ಕೆ.ಪಿ.ಸಾಗರ್ ರಾಜು

• ಪ್ರಜೋದಯ ವರದಿ

**ಹಾಸನ:** ರಾಜ್ಯದಲ್ಲಿ ಬಿಡದಿ ಟೌನ್‌ಶಿಪ್‌ಗಾಗಿ ಕೃಷಿ ಭೂಮಿ ಸ್ವಾಧೀನಕ್ಕೆ ವಿರೋಧ ವ್ಯಕ್ತವಾಗಿರುವ ಬೆನ್ನಲ್ಲೇ, ಹಾಸನದಲ್ಲೂ ಅದೇ ಮಾದರಿಯ ಹೋರಾಟಕ್ಕೆ ಹೂವಿನಹಳ್ಳಿ ಹಾಗು ಹೂವಿನಹಳ್ಳಿ ಕಾವಲು ಗ್ರಾಮದ ರೈತರು ಸಜ್ಜಾಗಿದ್ದಾರೆ.

ತಾಲ್ಲೂಕಿನ ಕಸಬಾ ಹೋಬಳಿಯ ಹೂವಿನಹಳ್ಳಿ ಹಾಗು ಹೂವಿನಹಳ್ಳಿ ಕಾವಲು ಗ್ರಾಮಗಳಲ್ಲಿ ಕರ್ನಾಟಕ ಗೃಹ ಮಂಡಳಿ ಪ್ರಸ್ತಾಪಿಸಿರುವ ವಸತಿ ಯೋಜನೆಗಾಗಿ ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಕ್ರಮಕ್ಕೆ ರೈತರು ಆಕ್ಷೇಪ ವ್ಯಕ್ತಪಡಿಸಿ, ಬಿಡದಿ ರೈತರ ಹೋರಾಟದ ಮಾದರಿಯಲ್ಲೇ ಪ್ರತಿಭಟನೆಗಿಳಿಯಲು ಮುಂದಾಗಿದ್ದಾರೆ.

ಭೂಸ್ವಾಧೀನ ಪ್ರಕ್ರಿಯೆಯ ಭಾಗವಾಗಿ ರೈತರಿಗೆ ಕಲಂ 15(2)ರ ಅಡಿಯಲ್ಲಿ ವಿಚಾರಣಾ ನೋಟೀಸ್ ಜಾರಿಯಾಗಿದೆ. ಅದಕ್ಕೆ ರೈತರು ಸಾಮೂಹಿಕವಾಗಿ ಆಕ್ಷೇಪಣೆ ಸಲ್ಲಿಸಿದ್ದಾರೆ. ಯಾರಿಗೋ ನಿವೇಶನ, ವಸತಿ ಸೌಲಭ್ಯ ಕಲ್ಪಿಸುವ ಉದ್ದೇಶಕ್ಕಾಗಿ ನಮ್ಮ ಬದುಕಿನ ಆಧಾರವಾದ ಕೃಷಿ ಭೂಮಿಯನ್ನು ಕಸಿದುಕೊಳ್ಳಲು ಅವಕಾಶ ನೀಡುವುದಿಲ್ಲ. ನಮ್ಮ ಭೂಮಿ ನಮ್ಮ ಹಕ್ಕು ಎಂಬುದು ರೈತರ ನಿಲುವಾಗಿದೆ.

ಕರ್ನಾಟಕ ಗೃಹ ಮಂಡಳಿ 494.14 ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲು ಮುಂದಾಗಿದ್ದು, ಅದರಲ್ಲಿ ಕೇವಲ 6 ಎಕರೆ ಮಾತ್ರ ಖರಾಬು ಭೂಮಿಯಾಗಿದೆ. ಉಳಿದ ಬಹುತೇಕ ಭೂಮಿ ನೀರಾವರಿ ಸೌಲಭ್ಯ ಹೊಂದಿರುವ ಫಲವತ್ತಾದ ಕೃಷಿ ಭೂಮಿಯಾಗಿದ್ದು, ವರ್ಷ ಪೂರ್ತಿ ಮಿಶ್ರ ಬೆಳೆ ಬೆಳೆಯುವ ಪ್ರದೇಶವಾಗಿದೆ. ಇದೇ ಭೂಮಿ ನೂರಾರು ರೈತ ಕುಟುಂಬಗಳ ಜೀವನೋಪಾಯಕ್ಕೆ ಆಧಾರವಾಗಿದೆ ಎಂದು ರೈತರು ತಮ್ಮ ಆಕ್ಷೇಪಣೆಯಲ್ಲಿ ಉಲ್ಲೇಖಿಸಿದ್ದಾರೆ.



### ಸಣ್ಣ ರೈತರ ಬದುಕಿನ ಮೇಲೆ ಹೊಡೆತ

**ಭೂಸ್ವಾಧೀನಕ್ಕೆ ಒಳಪಡುವ ರೈತರು ಬಹುತೇಕ ಸಣ್ಣ ಮತ್ತು ಅತಿಸಣ್ಣ ಹಿಡುವಳಿದಾರರಾಗಿದ್ದಾರೆ. ಪ್ರಾಥಮಿಕ ಅಧಿಸೂಚನೆಯಲ್ಲಿರುವ ಸುಮಾರು 400ಕ್ಕೂ ಹೆಚ್ಚು ಸರ್ವೆ ಸಂಖ್ಯೆಗಳೇ ಇದಕ್ಕೆ ಸಾಕ್ಷಿಯಾಗಿವೆ. ಭೂಮಿ ಕಳೆದುಕೊಂಡರೆ ಕೃಷಿಯಷ್ಟೇ ಅಲ್ಲ, ಕುಟುಂಬಗಳ ಆರ್ಥಿಕ ಭದ್ರತೆಯೂ ಸಂಪೂರ್ಣ ಕುಸಿಯಲಿದೆ ಎಂಬ ಆತಂಕ ವ್ಯಕ್ತವಾಗಿದೆ.**

**(ಎಲ್ಲೆಲ್ಲಿ ಎಷ್ಟು ಜಮೀನು)**

**ಬ್ಲಾಕ್-1**
**ಹೂವಿನಹಳ್ಳಿ ಕಾವಲು- 340 ಎಕರೆ 12 ಗುಂಟೆ**
**ಹೂವಿನಹಳ್ಳಿ- 41 ಎಕರೆ 35 ಗುಂಟೆ**

**ಬ್ಲಾಕ್-2**
**ಹೂವಿನಹಳ್ಳಿ ಕಾವಲು - 107 ಎಕರೆ 7 ಗುಂಟೆ**

> **ಯಾರನ್ನೋ ಉದ್ಧಾರ ಮಾಡಲು ಫಲವತ್ತಾದ ಕೃಷಿ ಭೂಮಿಯನ್ನು ನಿವೇಶನ ಉದ್ದೇಶಕ್ಕಾಗಿ ಸ್ವಾಧೀನ ಪಡಿಸಿಕೊಳ್ಳಲು ಗೃಹಮಂಡಳಿ ರೈತರಿಗೆ ನೋಟೀಸ್ ನೀಡಿದೆ. ಯಾವ ರೈತರು ಭೂಮಿ ನೀಡಲು ಸಿದ್ಧವಿಲ್ಲ. ಬಿಡದಿ ಮಾದರಿಯಲ್ಲಿ ನಾವು ಹೋರಾಟ ನಡೆಸುತ್ತೇವೆ.**
> **-ಗಿರೀಶ್, ರೈತ**

### ಹೈನುಗಾರಿಕೆಯ ಮೇಲೂ ಹೊಡೆತ

ಹೂವಿನಹಳ್ಳಿ ಹಾಗೂ ಹೂವಿನಹಳ್ಳಿ ಕಾವಲು ಗ್ರಾಮಗಳು ಕೃಷಿಯ ಜೊತೆ ಹೈನುಗಾರಿಕೆಯಲ್ಲೂ ಮುಂಚೂಣಿಯಲ್ಲಿವೆ. ಇಲ್ಲಿನ ರೈತರು ಪ್ರತಿದಿನ ಸುಮಾರು 2,500 ರಿಂದ 3,000 ಲೀಟರ್ ಹಾಲು ಉತ್ಪಾದಿಸಿ ಹಾಲು ಒಕ್ಕೂಟಗಳಿಗೆ ಪೂರೈಕೆ ಮಾಡುತ್ತಿದ್ದಾರೆ. ಕೃಷಿ ಭೂಮಿ ಕಳೆದುಕೊಂಡರೆ ಜಾನುವಾರುಗಳಿಗೆ ಮೇವು ಬೆಳೆಯುವ ವ್ಯವಸ್ಥೆಯೂ ಇಲ್ಲವಾಗಲಿದ್ದು, ಹೈನುಗಾರಿಕೆಯೂ ಸಂಕಷ್ಟಕ್ಕೆ ಸಿಲುಕಲಿದೆ ಎಂದು ರೈತರು ಎಚ್ಚರಿಸಿದ್ದಾರೆ.

### ಬೇಡಿಕೆಯೇ ಇಲ್ಲದಾಗ ಹೊಸ ಬಡಾವಣೆ ಏಕೆ ?

ಹಾಸನ ನಗರಾಭಿವೃದ್ಧಿ ಪ್ರಾಧಿಕಾರ ಈಗಾಗಲೇ ಸುಮಾರು 13 ಸಾವಿರಕ್ಕೂ ಹೆಚ್ಚು ನಿವೇಶನಗಳನ್ನು ಅಭಿವೃದ್ಧಿಪಡಿಸಿದ್ದು, ಅವುಗಳ ಹಂಚಿಕೆ ಪ್ರಕ್ರಿಯೆ ಇನ್ನೂ ಪೂರ್ಣಗೊಂಡಿಲ್ಲ. ಎಸ್.ಎಂ.ಕೃಷ್ಣ ಬಡಾವಣೆಯಲ್ಲಿಯೇ ಸಾಕಷ್ಟು ನಿವೇಶನಗಳು ಖಾಲಿ ಉಳಿದಿವೆ. ಜಿಲ್ಲೆಯ ವಿವಿಧ ಖಾಸಗಿ ಬಡಾವಣೆಗಳಲ್ಲೂ ನೂರಾರು ನಿವೇಶನಗಳು ಮಾರಾಟವಾಗದೆ ಉಳಿದಿವೆ. ಕರ್ನಾಟಕ ಗೃಹ ಮಂಡಳಿಯ ಹಿಂದಿನ ಯೋಜನೆಗಳಲ್ಲಿಯೂ ಇನ್ನೂ ಅನೇಕ ನಿವೇಶನಗಳು ಖರೀದಿದಾರರ ನಿರೀಕ್ಷೆಯಲ್ಲಿವೆ. ಇಂತಹ ಸಂದರ್ಭದಲ್ಲಿ ಹೊಸದಾಗಿ ನೂರಾರು ಎಕರೆ ಕೃಷಿ ಭೂಮಿಯನ್ನು ಸ್ವಾಧೀನ ಪಡಿಸಿಕೊಂಡು ಮತ್ತೊಂದು ಬಡಾವಣೆ ನಿರ್ಮಿಸುವುದು ಅವೈಜ್ಞಾನಿಕ ನಿರ್ಧಾರವೆಂದು ರೈತರು ಆರೋಪಿಸಿದ್ದಾರೆ.

### ದೊಡ್ಡಮಟ್ಟದ ಸಂಘಟಿತ ಹೋರಾಟಕ್ಕೆ ಕರೆ

ಸರ್ಕಾರ ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳುವ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ, ರೈತರು ದೊಡ್ಡಮಟ್ಟದಲ್ಲಿ ಸಂಘಟಿತ ಹೋರಾಟ ನಡೆಸಲು ಸಿದ್ಧತೆ ನಡೆಸುತ್ತಿದ್ದಾರೆ. ಭೂಮಿ ಕೇವಲ ಆಸ್ತಿ ಅಲ್ಲ, ಅದು ಬದುಕು, ಉದ್ಯೋಗ ಮತ್ತು ಮುಂದಿನ ಪೀಳಿಗೆಯ ಭದ್ರತೆ. ಹೀಗಾಗಿ ಯಾವುದೇ ಪರಿಹಾರದ ಆಮಿಷಕ್ಕೂ ಜಮೀನು ಬಿಟ್ಟುಕೊಡುವ ಪ್ರಶ್ನೆಯೇ ಇಲ್ಲವೆಂದು ರೈತರು ಒಕ್ಕೊರಲಿನಿಂದ ಭೂಸ್ವಾಧೀನ

» ನಾಲ್ಕನೇ ಪುಟದಲ್ಲಿ

ಸಿನಿ ಪ್ರಭಾ
E-mail : prajodayahsn@gmail.com
ಪ್ರಜೋದಯ
03 ಜುಲೈ 2026 ಶುಕ್ರವಾರ

# ಟಾಕ್ಸಿಕ್ ಬರೋವರೆಗೂ ಕಾಯಬೇಡಿ

## ಜುಲೈನಲ್ಲಿ ಬರ್ತಿವೆ ಇಂಟ್ರೆಸ್ಟಿಂಗ್ ಕನ್ನಡ ಸಿನಿಮಾಗಳು

ವರ್ಷದ 6 ತಿಂಗಳು ಮುಗಿದು 7ನೇ ತಿಂಗಳು ಆರಂಭವಾಗಿದೆ. ಮೊದಲ 6 ತಿಂಗಳಲ್ಲಿ ಕನ್ನಡ ಸಿನಿಮಾಗಳ ಸಾಧನೆ ಹೇಳಿಕೊಳ್ಳುವಂತಿಲ್ಲ. 100ಕ್ಕೂ ಅಧಿಕ ಸಿನಿಮಾಗಳು ತೆರೆಗೆ ಬಂದ್ರು, ಗೆದ್ದಿದ್ದು ಎರಡು ಸಿನಿಮಾ ಮಾತ್ರ. ಮುಂದೆ ಟಾಕ್ಸಿಕ್ ರೀತಿಯ ದೊಡ್ಡ ಸಿನಿಮಾಗಳು ಬಿಡುಗಡೆಗೆ ಸಜ್ಜಾಗುತ್ತಿವೆ. ಇನ್ನು ಜುಲೈ ತಿಂಗಳಲ್ಲಿ ಒಂದಷ್ಟು ಇಂಟ್ರೆಸ್ಟಿಂಗ್ ಸಿನಿಮಾ ಬಿಡುಗಡೆಗೆ ಅಣಿಯಾಗುತ್ತಿವೆ.

ಕಿಚ್ಚು ಸುದೀಪ್, ದುನಿಯಾ ವಿಜಯ್, ಶ್ರೀಮುರಳಿ, ರಕ್ಷಿತ್ ಶೆಟ್ಟಿ, ರಿಷಬ್ ಶೆಟ್ಟಿ, ಉಪೇಂದ್ರ, ಸೇರಿದಂತೆ ಕನ್ನಡದ ಸ್ಟಾರ್ ನಟರ ಸಿನಿಮಾಗಳು ಈ ವರ್ಷ ಬಿಡುಗಡೆಗೆ ಸಜ್ಜಾಗಿಲ್ಲ. ಟಾಕ್ಸಿಕ್ ಹಾಗೂ ರಾಮಾಯಣ ಸಿನಿಮಾಗಳ ಮೂಲಕ ಯಶ್ ಪ್ರೇಕ್ಷಕರ ಮುಂದೆ ಬರ್ತಿದ್ದಾರೆ. ಇದಕ್ಕಾಗಿ ರಾಕಿಂಗ್ ಸ್ಟಾರ್ 4 ವರ್ಷ ವ್ಯಯಿಸಿದ್ದಾರೆ. ಲ್ಯಾಂಡ್‌ಲಾಡ್ ಆಗಿ ವರ್ಷದ ಆರಂಭದಲ್ಲೇ ದುನಿಯಾ ವಿಜಯ್ ಚಿತ್ರಮಂದಿರಕ್ಕೆ ಬಂದಿದ್ದರು. ಸಿಟಿಲೈಟ್ಸ್ ಚಿತ್ರವನ್ನು ಕಟ್ಟಿಕೊಡುತ್ತಿದ್ದಾರೆ.

ಗಣೇಶ್ ನಟನೆಯ ಯಾವುದಾದರೂ ಒಂದು ಸಿನಿಮಾ ಈ ವರ್ಷ ತೆರೆಗೆ ಬರಲಿದೆ. ಶಿವಣ್ಣನ 2 ಸಿನಿಮಾ ಬಿಡುಗಡೆಯಾದರೂ ಅಚ್ಚರಿ ಪಡಬೇಕಿಲ್ಲ. ಇನ್ನು ಜುಲೈ ರಿಲೀಸ್ ಕನ್ನಡ ಸಿನಿಮಾಗಳ ಲಿಸ್ಟ್ ಮುಂದೆ ಇದೆ ಓದಿ.

**ಗ್ರಾಮಾಯಣ:** ವಿನಯ್ ರಾಜ್‌ಕುಮಾರ್ ಹಾಗೂ ಮೇಘಾ ಶೆಟ್ಟಿ ನಟನೆಯ ಗ್ರಾಮಾಯಣ ಸಿನಿಮಾ ಈ ವಾರ ತೆರೆಗೆ ಬರ್ತಿದೆ. ಈಗಾಗಲೇ ಚಿತ್ರದ ಟ್ರೈಲರ್ ಹಾಗೂ ಸಾಂಗ್ಸ್ ರಿಲೀಸ್ ಆಗಿ ಗಮನ ಸೆಳೆಯುತ್ತಿದೆ. ಹಳ್ಳಿ ಸೊಗಡಿನ ರಗಡ್ ಲವ್ ಸ್ಟೋರಿ ಚಿತ್ರದಲ್ಲಿದೆ. ಜುಲೈ 3ರಂದು ಸಿನಿಮಾ ಪ್ರೇಕ್ಷಕರ ಮುಂದೆ ಬರಲಿದೆ. ದೇವನೂರು ಚಂದ್ರು ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ಪೂರ್ಣಚಂದ್ರ ತೇಜಸ್ವಿ ಸಂಗೀತ ಚಿತ್ರಕ್ಕಿದೆ. ಈಗಾಗಲೇ ಸಿನಿಮಾ ಪ್ರಮೋಷನ್ ಭರ್ಜರಿಯಾಗಿ ನಡ್ತೀದೆ.

**ಮದರ್ ಪ್ರಾಮಿಸ್:** ಡಾಲಿ ಧನಂಜಯ್ ನಿರ್ಮಿಸಿ ನಟಿಸಿರುವ ಮದರ್ ಪ್ರಾಮಿಸ್ ಸಿನಿಮಾ ಜುಲೈ 10ರಂದು ಬಿಡುಗಡೆ ಆಗಲಿದೆ. ಚಿತ್ರಕ್ಕೆ ಪೂರ್ಣಚಂದ್ರ ಮೈಸೂರು ಸಾರಥ್ಯ ವಹಿಸಿದ್ದಾರೆ. ಇದೊಂದು ಫನ್ ಎಂಟರ್‌ಟೈನರ್ ಸಿನಿಮಾ. ಟ್ರೈಲರ್ ನೋಡಿ ಸಿನಿಮಾ ನೋಡಲೇಬೇಕು ಎಂದು ಸಾಕಷ್ಟು ಜನ ಕಾಯುತ್ತಿದ್ದಾರೆ. ಆದರೆ ನಿರೀಕ್ಷಿತ ಮಟ್ಟದಲ್ಲಿ ಚಿತ್ರತಂಡ ಪ್ರಚಾರ ಮಾಡುತ್ತಿಲ್ಲ. ಚಿತ್ರಕ್ಕೆ ಯು/ಎ ಸರ್ಟಿಫಿಕೇಟ್ ಸಿಕ್ಕಿದ್ದು 2 ಗಂಟೆ 46 ನಿಮಿಷ ಕಾಲಾವಧಿಯ ಸಿನಿಮಾ ಇದು.

**ಕರಾವಳಿ:** ಪ್ರಜ್ವಲ್ ದೇವರಾಜ್ ಹಾಗೂ ರಾಜ್ ಬಿ ಶೆಟ್ಟಿ ನಟನೆಯ ಕರಾವಳಿ ಸಿನಿಮಾ ಜುಲೈ 24ಕ್ಕೆ ತೆರೆಗೆ ಬರ್ತಿದೆ. ಕಳೆದ ವರ್ಷ ಅದೇ ದಿನ ಸು ಫ್ರಂ ಸೋ ಸಿನಿಮಾ ತೆರೆಕಂಡು ಬ್ಲಾಕ್‌ಬಸ್ಟರ್ ಹಿಟ್ ಆಗಿತ್ತು. ಅಂಬಿ ನಿಂಗೆ ವಯಸ್ಸಾಯ್ತೋ ಸಿನಿಮಾ ನಿರ್ದೇಶನ ಮಾಡಿದ್ದ ಗುರುದತ್ ಗಾಣಿಗ ಈ ಚಿತ್ರವನ್ನು ಕಟ್ಟಿಕೊಟ್ಟಿದ್ದಾರೆ. ಕರಾವಳಿ ಭಾಗದ ಕಂಬಳಿ ಕ್ರೀಡೆಯನ್ನು ಕೇಂದ್ರವಾಗಿಟ್ಟುಕೊಂಡು ಸಿನಿಮಾ ಮಾಡಿದ್ದಾರೆ.

**ಪಿಕ್ಚರ್:** ಗೋಲ್ಡನ್ ಮೂವೀಸ್ ಬ್ಯಾನರ್ ಅಡಿಯಲ್ಲಿ ನಟ ಗಣೇಶ್ ಹಾಗೂ ಪತ್ನಿ ಶಿಲ್ಪಾ ದಂಪತಿ ನಿರ್ಮಾಣದ ತುಳು ಸಿನಿಮಾ ಇದು. ಸಂದೀಪ ಬೆದ್ರೆ ಪಿಕ್ಚರ್ ಕಥೆಯನ್ನು ತೆರೆಗೆ ತರುತ್ತಿದ್ದಾರೆ. ನಿತ್ಯ ಪ್ರಕಾಶ್ ಹೀರೊ ಆಗಿ ನಟಿಸಿದ್ದಾರೆ. ಕೌಟುಂಬಿಕ ಕಥಾಹಂದರದ ಫನ್ ಎಂಟರ್‌ಟೈನರ್ ಸಿನಿಮಾ ಇದಾಗಿದ್ದು ಜುಲೈ 24ರಂದು ತೆರೆಗೆ ಬರಲಿದೆ. ಅಮೃತಾ ಸುದು ಚಿತ್ರದ ನಾಯಕಿ. ಇನ್ನುಳಿದಂತೆ ತುಳು ರಂಗಭೂಮಿ ಹಾಗೂ ಚಿತ್ರರಂಗದ ಕಲಾವಿದರು ಚಿತ್ರದಲ್ಲಿ ನಟಿಸಿದ್ದಾರೆ. ಇನ್ನುಳಿದಂತೆ ಡೆಡ್ಲಿ ಕಿಲ್ಲರ್, ಲವ್ ಸೀಸನ್ಸ್, ನಾಗಬಂಧಂ ಸೇರಿದಂತೆ ಹಲವು ಸಿನಿಮಾಗಳು ಜುಲೈನಲ್ಲಿ ತೆರೆಗೆ ಬರ್ತಿವೆ. ಜುಲೈ 24ರಂದು ಅಣ್ಣಾವ್ರ ನಾನೊಬ್ಬ ಕಳ್ಳ ಸಿನಿಮಾ ರೀ-ರಿಲೀಸ್ ಆಗ್ತಿದೆ.




## ಮಹಾನ್ ರಿಲೀಸ್ ಆಗಿಲ್ಲ.. ಆಗ್ಲೇ ಇನ್ನೊಂದು ಸಿನಿಮಾನಾ?

### ಡಾರ್ಲಿಂಗ್ ಕೃಷ್ಣ ಹೀರೋ



ಆಕಾಶ ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ವಿಜಯ್ ರಾಘವೇಂದ್ರ ಅಭಿನಯದ ಮಹಾನ್ ಚಿತ್ರವನ್ನು ನಿರ್ಮಿಸುತ್ತಿರುವ ಪ್ರಕಾಶ್ ಬೂದೂರು, ಈಗ ನೂತನ ಚಿತ್ರವನ್ನು ಆರಂಭಿಸಿದ್ದಾರೆ. ಮಹಾನ್ ಚಿತ್ರದ ನಿರ್ದೇಶಕ ಪಿ.ಸಿ. ಶೇಖರ್ ಅವರೆ ಈ ನೂತನ ಚಿತ್ರವನ್ನು ನಿರ್ದೇಶಿಸುತ್ತಿದ್ದು, ಡಾರ್ಲಿಂಗ್ ಕೃಷ್ಣ ನಾಯಕರಾಗಿ ನಟಿಸುತ್ತಿದ್ದಾರೆ.

ಶೇಷಾದ್ರಿಪುರಂನ ಶ್ರೀಮಹಾಲಕ್ಷ್ಮಿ ದೇವಸ್ಥಾನದಲ್ಲಿ ಸರಳ ಪೂಜಾ ಸಮಾರಂಭದೊಂದಿಗೆ ಈ ಚಿತ್ರಕ್ಕೆ ಚಾಲನೆ ದೊರೆಯಿತು. ನಿರ್ಮಾಪಕ ಪ್ರಕಾಶ್ ಬೂದೂರು, ನಿರ್ದೇಶಕ ಪಿ.ಸಿ.ಶೇಖರ್ ಹಾಗೂ ನಾಯಕ ಡಾರ್ಲಿಂಗ್ ಕೃಷ್ಣ ಪೂಜಾ ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ಚಿತ್ರದ ಘೋಷಣೆಯನ್ನಷ್ಟೇ ಮಾಡಿದ್ದು, ಶೀರ್ಷಿಕೆ ಸೇರಿದಂತೆ ಉಳಿದ ಮಾಹಿತಿ ಮುಂದಿನ ದಿನಗಳಲ್ಲಿ ತಿಳಿಯಲಿದೆ.

ನಮ್ಮ ಮುಂದಿನ ಚಿತ್ರವನ್ನು ಪ್ರತಿಭಾವಂತ ನಟ ಡಾರ್ಲಿಂಗ್ ಕೃಷ್ಣ ಹಾಗೂ ಖ್ಯಾತ ನಿರ್ದೇಶಕ ಪಿ.ಸಿ. ಶೇಖರ್ ಅವರೊಂದಿಗೆ ಘೋಷಿಸುತ್ತಿರುವುದು ನನಗೆ ಅಪಾರ ಸಂತೋಷ ಮತ್ತು ಹೆಮ್ಮೆಯ ವಿಷಯವಾಗಿದೆ. ಮಹಾನ್ ಚಿತ್ರದ ನಿರ್ಮಾಣದ ಯಶಸ್ವಿ ಪಯಣದ ನಂತರ, ನಿರ್ದೇಶಕ ಪಿ.ಸಿ. ಶೇಖರ್ ಅವರೊಂದಿಗೆ ಇದು ನನ್ನ ಎರಡನೇ ಸಿನಿಮಾ. ಅವರೊಂದಿಗೆ ಕೆಲಸ ಮಾಡಿದ ಅನುಭವ ನನ್ನಲ್ಲಿ ಅವರ ಕಥೆ ಹೇಳುವ ಶೈಲಿ, ಚಲನಚಿತ್ರದ ಮೇಲಿನ ದೃಷ್ಟಿಕೋನ ಹಾಗೂ ಅತ್ಯುತ್ತಮ ಮನರಂಜನಾ ಚಿತ್ರಗಳನ್ನು ನೀಡುವ ಬದ್ಧತೆಯ ಮೇಲೆ ಇನ್ನಷ್ಟು ವಿಶ್ವಾಸವನ್ನು ಮೂಡಿಸಿದೆ. ಭಾವನೆಗಳು, ವಾಣಿಜ್ಯ ಅಂಶಗಳು ಹಾಗೂ ಪ್ರೇಕ್ಷಕರನ್ನು ತಟ್ಟುವ ಕಥನವನ್ನು ಸಮತೋಲನದಿಂದ ಕಟ್ಟಿಕೊಡುವ ಅವರ ಸಾಮರ್ಥ್ಯ ಅವರನ್ನು ವಿಶಿಷ್ಟ ನಿರ್ದೇಶಕರನ್ನಾಗಿ ಮಾಡುತ್ತದೆ.


ಶೇಖರ್ ಅವರು ಈ ಚಿತ್ರದ ಕಥೆಯನ್ನು ಮೊದಲ ಬಾರಿ ನನಗೆ ವಿವರಿಸಿದ ಕ್ಷಣದಲ್ಲೇ ನಾನು ಅದರೊಳಗೆ ಸಂಪೂರ್ಣವಾಗಿ ತೊಡಗಿಸಿಕೊಂಡೆ. ಈ ಚಿತ್ರವನ್ನು ನಿರ್ಮಿಸಲು ನನ್ನನ್ನು ಹೆಚ್ಚು ಪ್ರೇರೇಪಿಸಿದ ಅಂಶವೆಂದರೆ ಇದರ ಪ್ರಮುಖ ಪಾತ್ರ. ಕಥೆ ಕೇಳುವ ಪ್ರತಿಯೊಂದು ಹಂತದಲ್ಲೂ ನನ್ನ ಮನಸ್ಸಿನಲ್ಲಿ ಮೂಡಿದ ಏಕೈಕ ಕಲಾವಿದ ಡಾರ್ಲಿಂಗ್ ಕೃಷ್ಣ. ಅವರ ಸಹಜ ಅಭಿನಯ, ಆಕರ್ಷಕ ವ್ಯಕ್ತಿತ್ವ, ಅತ್ಯುತ್ತಮ ಕಾಮಿಡಿ ಟೈಮಿಂಗ್ ಹಾಗೂ ಭಾವನಾತ್ಮಕ ಪಾತ್ರಗಳನ್ನು ಜೀವಂತಗೊಳಿಸುವ ಸಾಮರ್ಥ್ಯ ಈ ಪಾತ್ರಕ್ಕೆ ಅವರನ್ನು ಅತ್ಯಂತ ಸೂಕ್ತರನ್ನಾಗಿ ಮಾಡಿದೆ. ಈ ಸಿನಿಮಾ ಅವರ ನಟನಾ ಜೀವನದಲ್ಲಿ ಮತ್ತೊಂದು ವಿಭಿನ್ನ ಹಾಗೂ ಸ್ಮರಣೀಯ ಅಧ್ಯಾಯವಾಗಲಿದೆ ಎಂಬ ವಿಶ್ವಾಸ ನನಗಿದೆ ಎಂದು ನಿರ್ಮಾಪಕ ಪ್ರಕಾಶ್ ಬೂದೂರು ತಿಳಿಸಿದ್ದಾರೆ.

## ಒಬ್ಬೊಬ್ರಾಗಿ ಬರ್ತೀರಾ.. ಇಲ್ಲಾ ಒಟ್ಟಿಗೆ ಬರ್ತೀರಾ?

**ಲೇಡೀಸ್ ಲೇಡೀಸ್ ಬಿಟ್ಟು ಬಾಕ್ಸ್ ಆಫೀಸ್ ವೈರಿಗಳಿಗೆ ಯಶ್ ಖಡಕ್ ಟಾಂಗ್**

ಟಾಕ್ಸಿಕ್ ಅಡ್ಡದಲ್ಲಿ ಏನಾಗ್ತಿದೆ? ಯಶ್ ಏನು ಮಾಡ್ತಿದ್ದಾರೆ? ಅವರ ಮುಂದಿನ ಪ್ಲಾನ್ ಏನು? ಅಂತ ಗೆಸ್ ಮಾಡಿ ಮಾಡಿ ಫ್ಯಾನ್ಸ್ ಅಂತು ಸುಸ್ತಾಗಿದ್ದರು. ಇನ್ನೇನು ರಿಲೀಸ್ ಆಗಬೇಕು ಅನ್ನೋವಾಗಲೇ ಸಿನಿಮಾ ಪೋಸ್ಟ್‌ಪೋನ್ ಆದ ನಿರಾಸೆಯಲ್ಲಿ ಬೇರೆ ಇದ್ದರು. ಕೊನೆಗೂ 3ನೇ ಬಾರಿ ರಿಲೀಸ್ ಡೇಟ್ ಅನೌನ್ಸ್ ಆಗುತ್ತಿದ್ದಂತೆ ಸ್ವಲ್ಪ ಸಮಾಧಾನ ಆಗಿದ್ದಾರೆ. ಈ ಬೆನ್ನಲ್ಲೇ ಯಶ್ ಅಂಡ್ ಟೀಮ್ ಟಾಕ್ಸಿಕ್ ಸಿನಿಮಾ ನಾಯಕಿಯ ಗ್ಲಿಂಪ್ಸ್ ಅನ್ನು ರಿವೀಲ್ ಮಾಡಿದೆ.

ಟಾಕ್ಸಿಕ್ ಕೇವಲ ಪ್ಯಾನ್ ಇಂಡಿಯಾ ಸಿನಿಮಾ ಅಲ್ಲ. ಭಾರಿ ಹೈಪ್ ಸೃಷ್ಟಿಸಿರುವ ಟಾಕ್ಸಿಕ್: ಎ ಫೇರಿಟೇಲ್ ಫಾರ್ ಗ್ರೋನ್-ಅಪ್ಸ್ ಗ್ಲೋಬಲ್ ಲೆವೆಲ್‌ನಲ್ಲಿ ರಿಲೀಸ್ ಆಗುತ್ತಿದೆ. ಟಾಕ್ಸಿಕ್ ಜಗತ್ತಿನ ಕರಾಳ ಹಾಗೂ ರೋಮಾಂಚನಕಾರಿ ಕ್ಷಣಗಳು ಕಣ್ತುಂಬಿ ಕೊಳ್ಳುವುದಕ್ಕೆ ಪ್ರೇಕ್ಷಕರು ಕೂಡ ತುದಿಗಾಲಲ್ಲಿ ನಿಂತಿದ್ದಾರೆ. ಈ ಮಧ್ಯೆ ಲೇಡೀಸ್ ಅಂಡ್ ಲೇಡೀಸ್ ಎಂಬ ನಾಯಕಿಯರ ಸ್ಪೆಷಲ್ ವೀಡಿಯೊ ಸೋಶಿಯಲ್ ಮೀಡಿಯಾದಲ್ಲಿ ಧೂಳೆಬ್ಬಿಸುತ್ತಿದೆ.



## ಸದ್ದಿಲ್ಲದೇ ಮತ್ತೊಂದು ಸಿನಿಮಾ ಚಿತ್ರೀಕರಣ ಮುಗಿಸಿದ ಶಿವಣ್ಣ

### ಶೀಘ್ರದಲ್ಲೇ ಸಿನಿಮಾ ತೆರೆಗೆ

ಕನ್ನಡ ಚಿತ್ರರಂಗದ ಬ್ಯುಸಿಯೆಸ್ಟ್ ಕಲಾವಿದ ಶಿವರಾಜ್‌ಕುಮಾರ್. ವರ್ಷಕ್ಕೆ ಎರಡ್ಮೂರು ಸಿನಿಮಾಗಳಲ್ಲಿ ನಟಿಸುವ ಪ್ರಯತ್ನ ಮಾಡುತ್ತಲೇ ಇರ್ತಾರೆ. ಕ್ಯಾನ್ಸರ್ ಚಿಕಿತ್ಸೆ ಕಾರಣಕ್ಕೆ ಶಿವಣ್ಣ ಕೊಂಚ ಬ್ರೇಕ್ ಪಡೆದಿದ್ದರು. 3 ತಿಂಗಳಲ್ಲಿ ಮತ್ತೆ ಸಿನಿಮಾ ಸೆಟ್‌ಗೆ ಮರಳಿದ್ದರು. ಮತ್ತೆ ಸಾಲು ಸಾಲು ಸಿನಿಮಾಗಳಲ್ಲಿ ನಟಿಸುತ್ತಿದ್ದಾರೆ. ಮತ್ತೊಂದು ಸಿನಿಮಾ ಚಿತ್ರೀಕರಣ ಮುಗಿಸಿದ್ದಾರೆ.

ಪೆದ್ದಿ ಚಿತ್ರದ ಗೌರ್ನಾಯ್ಡು ಪಾತ್ರದ ಮೂಲಕ ಶಿವಣ್ಣ ಇತ್ತೀಚೆಗೆ ಪ್ರೇಕ್ಷಕರ ಮುಂದೆ ಬಂದಿದ್ದರು. ಇದೀಗ ಡ್ಯಾಡ್ ಸಿನಿಮಾ ಚಿತ್ರೀಕರಣ ಮುಗಿಸಿದ್ದಾರೆ. ಈ ಬಗ್ಗೆ ಅಧಿಕೃತವಾಗಿ ಮಾಹಿತಿ ಲಭ್ಯವಾಗಿದೆ. ಕಳೆದ ವರ್ಷ ಆಗಸ್ಟ್‌ನಲ್ಲಿ ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ಚಿತ್ರ ಸೆಟ್ಟೇರಿತ್ತು. ವರ್ಷ ಕಳೆಯುವ ಮುನ್ನ ಸಿನಿಮಾ ಚಿತ್ರೀಕರಣ ಮುಕ್ತಾಯವಾಗಿದೆ. ಮೈರಾ ಕ್ರಿಯೇಷನ್ ಬ್ಯಾನರ್ ಅಡಿಯಲ್ಲಿ ಹರೀಶ್ ಪೆದ್ದಿ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಅನಿಲ್ ಕನ್ನೆಗಂಟಿ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ.

ಡ್ಯಾಡ್ ಚಿತ್ರದಲ್ಲಿ ಡಾಕ್ಟರ್ ಪಾತ್ರದಲ್ಲಿ ಶಿವರಾಜ್ ಕುಮಾರ್ ನಟಿಸಿದ್ದಾರೆ. ದಶಕಗಳ ಹಿಂದೆ ಗಡಿಬಿಡಿ ಕೃಷ್ಣ ಚಿತ್ರದಲ್ಲಿ ಸ್ಟೆತೊಸ್ಕೋಪ್ ಹಿಡಿದಿದ್ದರು. ಮತ್ತೆ ಈ ಚಿತ್ರದಲ್ಲಿ ಅದೇ ಪಾತ್ರ ನಿಭಾಯಿಸಿದ್ದಾರೆ. ಶರ್ಮಿಳಾ ಮಾಂಡ್ರೆ, ಬೇಬಿ ನಕ್ಷತ್ರ, ಬಾಬು, ಮಲಯಾಳಂ ನಟ ಸೂರಜ್ ವೆಂಜರಮೂಡು ಚಿತ್ರದ ತಾರಾಗಣದಲ್ಲಿದ್ದಾರೆ. ಮೈಸೂರು ಸೇರಿದಂತೆ ನಾನಾ ಭಾಗದಲ್ಲಿ ಚಿತ್ರೀಕರಣ ನಡೆದಿತ್ತು. ಅರ್ಜುನ್ ಜನ್ಯ ಸಂಗೀತ, ಬಿ. ರಾಜಶೇಖರ್ ಚಿತ್ರಕ್ಕಿದೆ.

ಡ್ಯಾಡ್ ಚಿತ್ರೀಕರಣ ಮುಗೀತು.. ಪ್ರತಿಯೊಂದು ಆಕ್ಷನ್ ಒಂದು ಕನಸನ್ನು ಹೊತ್ತೊಯ್ದಿತು. ಪ್ರತಿ ಕಟ್ ಒಂದು ಪಾಠವನ್ನು ಹೊತ್ತುಕೊಂಡಿತು. ಚಿತ್ರೀಕರಣ ಮುಗಿದರೂ ಈ ಪ್ರಯಾಣವು ನನ್ನೊಂದಿಗೆ ಶಾಶ್ವತವಾಗಿ ಉಳಿಯುತ್ತದೆ. ಅದ್ಭುತ ಪಾತ್ರವರ್ಗ, ಸಿಬ್ಬಂದಿ ಹಾಗೂ ಈ ಚಿತ್ರವನ್ನು ನಂಬಿದ ಎಲ್ಲರಿಗೂ ನನ್ನ ಕೃತಜ್ಞತೆಗಳು. ನಮ್ಮ ಪ್ರೀತಿಯ ಶಿವಣ್ಣ ಅವರನ್ನು ನಿರ್ದೇಶಿಸುವುದು ನನ್ನ ಸೌಭಾಗ್ಯ. ಕ್ಯಾಮರಾ ರೋಲಿಂಗ್ ನಿಂತಿರಬಹುದು. ಆದರೆ ಡ್ಯಾಡ್ ಹೃದಯ ಬಡಿತ ಈಗ ಪ್ರಾರಂಭವಾಗಿದೆ ಎಂದು ನಿರ್ದೇಶಕರು ಬರೆದುಕೊಂಡಿದ್ದಾರೆ.

ತಂದೆ ಹಾಗೂ ಮಗಳ ಭಾವನಾತ್ಮಕ ಕಥೆ ಡ್ಯಾಡ್ ಚಿತ್ರದಲ್ಲಿದೆ. ಬಾಲನಟಿ ನಕ್ಷತ್ರ, ಚಿತ್ರದ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾಳೆ. ಶಿವಣ್ಣ ಹಾಗೂ ನಕ್ಷತ್ರ ದೃಶ್ಯಗಳೇ ಚಿತ್ರದ ಹೈಲೆಟ್ ಆಗಿರಲಿದೆ. ಸಖತ್ ಸ್ಟೈಲಿಶ್ ಅವತಾರದಲ್ಲಿ ಸೆಂಚುರಿ ಸ್ಟಾರ್ ನಟಿಸಿದ್ದಾರೆ. ಶರ್ಮಿಳಾ ಮಾಂಡ್ರೆ ನಾಯಕಿಯಾಗಿ ಬಣ್ಣ ಹಚ್ಚಿದ್ದಾರೆ. ಕನ್ನಡ ಮಾತ್ರವಲ್ಲದೇ ತೆಲುಗು ಹಾಗೂ ಮಲಯಾಳಂ ಭಾಷೆಗಳಿಗೆ ಸಿನಿಮಾ ಡಬ್ ಆಗಿ ತೆರೆಗೆ ಬರಲಿದೆ.

ಎಮೋಷನ್ ಜೊತೆಗೆ ಥ್ರಿಲ್ಲಿಂಗ್ ಅಂಶಗಳು ಡ್ಯಾಡ್ ಚಿತ್ರದಲ್ಲಿದೆ. ಇನ್ನೆರಡು ತಿಂಗಳಲ್ಲಿ ಸಿನಿಮಾ ಬಿಡುಗಡೆ ತಯಾರಿ ನಡ್ತೀದೆ. ಮತ್ತೊಂದು ಕಡೆ ಪವನ್ ಒಡೆಯರ್ ನಿರ್ದೇಶನದ ಬೇಲ್ ಸಿನಿಮಾ ಸಹ ಶಿವಣ್ಣ ಮುಗಿಸಿದ್ದಾರೆ. ಕೆವಿಎನ್ ಪ್ರೊಡಕ್ಷನ್ಸ್ ಸಂಸ್ಥೆ ನಿರ್ಮಾಣದ ಈ ಸಿನಿಮಾ ಯಾವಾಗ ಶುರುವಾಯ್ತು, ಯಾವಾಗ ಮುಗೀತು ಎನ್ನುವುದು ಬಹುತೇಕರಿಗೆ ಗೊತ್ತಿಲ್ಲ. ಜೈಲರ್ ಬಳಿಕ ತೆಲುಗು, ತಮಿಳು ಸಿನಿಮಾಗಳಲ್ಲಿ ಕೂಡ ಶಿವಣ್ಣ ನಟಿಸುತ್ತಿದ್ದಾರೆ. ಜೈಲರ್-2 ಚಿತ್ರೀಕರಣ ಸಹ ಮುಗಿಸಿದ್ದಾರೆ.

ಸದ್ಯ ತೆಲುಗಿನಲ್ಲಿ ಗುಮ್ಮಡಿ ನರಸಯ್ಯ ಬಯೋಪಿಕ್ ಚಿತ್ರದಲ್ಲಿ ಶಿವರಾಜ್‌ಕುಮಾರ್ ಹೀರೊ ಆಗಿ ನಟಿಸುತ್ತಿದ್ದಾರೆ. ಆಂಧ್ರದ ಮಾದರಿ ರಾಜಕಾರಣಿ ಪಾತ್ರದಲ್ಲಿ ಬಣ್ಣ ಹಚ್ಚಿದ್ದಾರೆ. ತಮಿಳಿನಲ್ಲಿ ಇನ್ನು ಹೆಸರಿಡದ ಹೊಸ ಸಿನಿಮಾದಲ್ಲಿ ಶಿವಣ್ಣ ನಟಿಸುತ್ತಿದ್ದಾರೆ. 666 ಆಪರೇಷನ್ ಡ್ರೀಮ್ ಥಿಯೇಟರ್ ಚಿತ್ರದಲ್ಲಿ ಏಜೆಂಟ್ ಪ್ರಕಾಶ್ ಆಗಿ ಶಿವಣ್ಣ ದರ್ಬಾರ್ ನಡೆಸೋಕೆ ಬರ್ತಿದ್ದಾರೆ. ಇನ್ನೆರಡು ದಿನಗಳಲ್ಲಿ ಚಿತ್ರದ ಟೀಸರ್ ರಿಲೀಸ್ ಆಗಲಿದೆ.




## ಅಂದಿನ ಐಕಾನಿಕ್ ಪಾತ್ರಗಳಿಗೆ ಇಂದಿನ ಪಾತ್ರಗಳನ್ನು ಹೋಲಿಸಬಹುದೇ?

ಅಮೆರಿಕಾ ಅಮೆರಿಕಾ ವರ್ಸಸ್ ಅಮೆರಿಕಾ ಅಮೆರಿಕಾ 2: ಮೇಷ್ಟ್ರು ನಾಗತಿಹಳ್ಳಿ ಚಂದ್ರಶೇಖರ್ ಮತ್ತೆ ಪ್ರತ್ಯಕ್ಷ ಆಗಿದ್ದಾರೆ. ಕಳೆದ ಕೆಲವು ವರ್ಷಗಳಿಂದ ಸಿನಿಮಾ ನಿರ್ದೇಶನದ ಕಡೆಗೆ ಮುಖ ಹಾಕಿರಲಿಲ್ಲ. ಯಾಕೋ ಸ್ವಲ್ಪ ದೂರವೇ ಉಳಿದು ಬಿಟ್ಟರಲ್ಲ ಎನ್ನುವಾಗಲೇ ಅಮೆರಿಕಾ ಅಮೆರಿಕಾ ಸೀಕ್ವೆಲ್‌ಗೆ ಕೈ ಹಾಕಿದ್ದರು. ಈ ವಿಷಯವನ್ನು ಮೊದಲು ಫಿಲ್ಮಿಬೀಟ್ ಕನ್ನಡದಲ್ಲಿ ವರದಿ ಕೂಡ ಮಾಡಲಾಗಿತ್ತು. ಆದರೆ, ಆಗಿನ್ನೂ ತೆರೆಮರೆಯಲ್ಲಿ ಸದ್ದಿಲ್ಲದೆ ಶೂಟಿಂಗ್ ಮಾಡುತ್ತಿದ್ದರು. ಇನ್ನೂ ಸಿನಿಮಾಗೂ ಟೈಟಲ್ ಅಧಿಕೃತಗೊಳಿಸಿರಲಿಲ್ಲ.

ಈ ನಾಗತಿಹಳ್ಳಿ ಚಂದ್ರಶೇಖರ್ ನಿರೀಕ್ಷೆ ಮಾಡಿದಂತೆ ತಮ್ಮ ಹೊಚ್ಚ ಹೊಸ ಸಿನಿಮಾಗೆ ಅಮೆರಿಕಾ ಅಮೆರಿಕಾ 2 ಎಂದು ಟೈಟಲ್ ಫಿಕ್ಸ್ ಮಾಡಿದ್ದಾರೆ. ಈ ಸೀಕ್ವೆಲ್‌ನಲ್ಲಿ ಕನ್ನಡ ಚಿತ್ರರಂಗದ ಯುವ ನಟರಾದ ನಿರೂಪ್ ಭಂಡಾರಿ, ಸಾನ್ವಿ ಶ್ರೀವತ್ಸವ ಹಾಗೂ ಪೃಥ್ವಿ ಅಂಬಾರ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಮನೋಮೂರ್ತಿ ಸಂಗೀತ ಸಂಯೋಜನೆ ಮಾಡಿದ್ದಾರೆ. ಈ ಕಾರಣಕ್ಕೆ ಮತ್ತೊಮ್ಮೆ ಕುತೂಹಲ ಕೆರಳಿಸುವಲ್ಲಿ ನಾಗತಿಹಳ್ಳಿ ಯಶಸ್ವಿಯಾಗಿದ್ದಾರೆ.

ಆದರೆ, 1997ರಲ್ಲಿ ನಾಗತಿಹಳ್ಳಿ ಚಂದ್ರಶೇಖರ್ ನಿರ್ದೇಶನದ ಅಮೆರಿಕಾ ಅಮೆರಿಕಾ ಸಿನಿಮಾದ ಸೂರ್ಯ, ಶಶಾಂಕ್ ಮತ್ತು ಭೂಮಿಕಾ ಪಾತ್ರಗಳು ಇಂದಿಗೂ ಕನ್ನಡಿಗರ ಮನಸ್ಸಿನಲ್ಲಿ ಹಚ್ಚ ಹಸಿರಾಗಿವೆ. ಹೆಚ್ಚು ಕಡಿಮೆ ಮೂರು ದಶಕಗಳ ನಂತರ ಮತ್ತೆ ಈ ಸಿನಿಮಾದ ಸೀಕ್ವೆಲ್ ರೆಡಿಯಾಗಿದೆ. ಇಲ್ಲೂ ಮೂರು ಪ್ರಮುಖ ಪಾತ್ರಗಳಿವೆ. ಹಾಗಿದ್ದರೆ, 97ರಲ್ಲಿ ತೆರೆಕಂಡಿದ್ದ ಅಮೆರಿಕಾ ಅಮೆರಿಕಾಗೂ ಇಂದಿನ ಅಮೆರಿಕಾ ಅಮೆರಿಕಾ 2 ದ ಪಾತ್ರಗಳಿಗೂ ಹೋಲಿಕೆ ಮಾಡಬಹುದೇ?




ಕಳೆದ 30 ವರ್ಷಗಳಲ್ಲಿ ಸಿನಿಮಾ ಜಗತ್ತು ಬದಲಾಗಿದೆ. ಪ್ರೇಕ್ಷಕರ ಅಭಿರುಚಿಗಳೂ ಬದಲಾಗಿದೆ. ತಂತ್ರಜ್ಞಾನ, ಸಿನಿಮಾ ಮೇಕಿಂಗ್ ಸ್ಟೈಲ್ ಬದಲಾಗಿದೆ. ಈಗ ನಾಗತಿಹಳ್ಳಿ ಚಂದ್ರಶೇಖರ್ 30 ವರ್ಷಗಳ ಬಳಿಕ ಸೀಕ್ವೆಲ್ ಅನ್ನು ಹೇಗೆ ಸೃಷ್ಟಿಸಿದ್ದಾರೆ? ಪಾತ್ರಗಳ ವಿನ್ಯಾಸ ಹೇಗಾಗಿದೆ? ಕಥೆಯೇನು? ಅನ್ನೋ ಕುತೂಹಲವಿದೆ. ಸದ್ಯಕ್ಕೆ ಸಾಮ್ಯತೆ ಅಂತ ಕಾಣಿಸುತ್ತಿರೋದು ಪಾತ್ರಗಳಷ್ಟೇ. ಹೀಗಾಗಿ ಇಲ್ಲಿದೆ ಒಂದು ಸ್ವಾರಸ್ಯಕರ ಹೋಲಿಕೆಯ ಪ್ರಯತ್ನ ಮಾಡಲಿದೆ.


### ರಮೇಶ್ ಅರವಿಂದ್-ಸೂರ್ಯ

**ಅಮೆರಿಕಾ ಅಮೆರಿಕಾ:** ಈ ಸಿನಿಮಾದ ಪ್ರಮುಖ ಪಾತ್ರದ ಸೂರ್ಯ. ಪಕ್ಕಾ ದೇಸಿ ಹುಡುಗ, ಹಳ್ಳಿಯ ಮಣ್ಣಿನ ಮಗ. ಡಾಲರ್ ಆಸೆಗಾಗಿ ಹೆತ್ತ ತಾಯ್ನಾಡನ್ನು ಬಿಟ್ಟು ವಿದೇಶಕ್ಕೆ ಹೋಗುವುದನ್ನು ವಿರೋಧಿಸುವ ಸ್ವಭಾವ ಉಳ್ಳವನು. ತಾಯ್ನಾಡು, ಪ್ರೀತಿಯ ಹುಡುಗಿ.. ಇದು ಅವನ ಬದುಕು. ಇಡೀ ಸಿನಿಮಾ ಪ್ರಮುಖವಾಗಿ ಮೂರು ಪಾತ್ರಗಳಲ್ಲಿ ಮುಂದೆ ಸಾಗುತ್ತೆ. ಅದರಲ್ಲಿ ಸೂರ್ಯ ಪಾತ್ರ ಪ್ರಮುಖವಾದದ್ದು. ಈ ಪಾತ್ರದಲ್ಲಿ ರಮೇಶ್ ಅರವಿಂದ್ ನಟಿಸಿದ್ದಾರೆ.

**ಅಮೆರಿಕಾ ಅಮೆರಿಕಾ 2:** ಅಂದ್ಹಾಗೆ, ಸೀಕ್ವೆಲ್ ಅಂದ ಕೂಡಲೇ ಅಮೆರಿಕಾ ಅಮೆರಿಕಾ ಸಿನಿಮಾದ ಮುಂದುವರೆದ ಭಾಗ ಆಗಬೇಕಿಲ್ಲ. ಏಷ್ಯಾನೆಟ್ ನ್ಯೂಸ್ ವರದಿ ಮಾಡಿರುವಂತೆ ಸಹನಾ ವಿಜಯಕುಮಾರ್ ಅವರ ಜನಪ್ರಿಯ ಕಾದಂಬರಿ ಕ್ಷಮೆಯನ್ನು ಆಧರಿಸಿ ಸಿನಿಮಾ ಮಾಡಲಾಗಿದೆ ಎಂದು ಹೇಳಲಾಗಿದೆ. ಹೀಗಾಗಿ ಇದು ಮುಂದುವರೆದ ಭಾಗ ಅಲ್ಲ. ಆದರೆ, ಇಲ್ಲೂ ಮೂರು ಪಾತ್ರಗಳಿವೆ. ಅದರಲ್ಲಿ ರಮೇಶ್ ಅರವಿಂದ್ ನಟಿಸಿದ ಸೂರ್ಯನಂತಹದ್ದೇ ಸ್ವಭಾವದ ಪಾತ್ರ ಇರಬಹುದೇ? ಅನ್ನೋ ಕುತೂಹಲವಂತೂ ಇದೆ. ಅದರಲ್ಲಿ ನಿರೂಪ್ ಭಂಡಾರಿ ಅಥವಾ ಪೃಥ್ವಿ ಯಾರೇ ನಟಿಸಿದರೂ ಬೆಸ್ಟ್ ಆಗಿರುತ್ತೆ.

### ಅಕ್ಷಯ್ ಆನಂದ್-ಶಶಾಂಕ್

**ಅಮೆರಿಕಾ ಅಮೆರಿಕಾ:** ಈ ಸಿನಿಮಾದಲ್ಲಿ ಬರುವ ಮತ್ತೊಂದು ಪ್ರಮುಖ ಪಾತ್ರ ಶಶಾಂಕ್. 90ರ ದಶಕದಲ್ಲಿ ಯುವಕರಲ್ಲಿದ್ದ ಅಮೆರಿಕದ ಕನಸು ಅನ್ನು ಪ್ರತಿನಿಧಿಸಿತ್ತು. ಹೇಗಾದರೂ ಮಾಡಿ ಅಮೆರಿಕಾಗೆ ಹೋಗಿ ಕೈತುಂಬಾ ಸಂಪಾದಿಸಿ ಐಷಾರಾಮಿ ಜೀವನ ನಡೆಸಬೇಕು ಅನ್ನೋ ಅಂದಿನ ಯುವಕರ ಮನಸ್ಥಿತಿಯನ್ನು ಬಿಂಬಿಸಿತ್ತು.




**ಅಮೆರಿಕಾ ಅಮೆರಿಕಾ 2:** ಒಂದು ವೇಳೆ ಈ ಸಿನಿಮಾದಲ್ಲಿ ಶಶಾಂಕ್ ಅಂತಹ ಸ್ವಭಾವದ ಪಾತ್ರ ಇದ್ದರೆ, ಆ ಪಾತ್ರವನ್ನು ನಿರೂಪ್ ಭಂಡಾರಿಗೆ ಸಖತ್ ಆಗಿ ಸೂಟ್ ಆಗುತ್ತೆ. ಒಂದೊಳ್ಳೆ ಹೋಲಿಕೆ ಆಗಬಹುದು.

### ಹೇಮಾ ಪಂಚಮುಖಿ-ಭೂಮಿಕಾ

**ಅಮೆರಿಕಾ ಅಮೆರಿಕಾ:** ಭೂಮಿಕಾ ಹಳ್ಳಿಯಿಂದ ಮದುವೆಯಾಗಿ ನೇರವಾಗಿ ಅಮೆರಿಕಾಗೆ ಹೋದಾಗ ಅಲ್ಲಿಯ ಯಾಂತ್ರಿಕ ಜೀವನಕ್ಕೆ ಹೊಂದಿಕೊಳ್ಳಲಾಗದೆ ಸಾಂಸ್ಕೃತಿಕ ಆಘಾತಕ್ಕೆ ಒಳಗಾಗುತ್ತಾಳೆ. ಪತಿಯ ಹಣದ ವ್ಯಾಮೋಹದ ಮಧ್ಯೆ ಒಂಟಿತನ ಕಾಡುತ್ತದೆ. ಅಂದಿನ ಕಾಲದಲ್ಲಿ ಮದುವೆಯಾಗಿ ತೆರಳುವ ಬಹುತೇಕ ಹೆಣ್ಣಿನ ಕಥೆ ಇದೇ ಆಗಿತ್ತು. ಆದ್ರೀಗ ಕಾಲ ಬದಲಾಗಿದೆ.

**ಅಮೆರಿಕಾ ಅಮೆರಿಕಾ 2:** ಈ ಸಿನಿಮಾದಲ್ಲಿ ಫೀಮೇಲ್ ಲೀಡ್ ಆಗಿ ಸಾನ್ವಿ ಶ್ರೀವತ್ಸವ ನಟಿಸಿದ್ದಾರೆ. ಇದರಲ್ಲಿ ಇವರ ಪಾತ್ರ ಎಂತಹದ್ದು ಅನ್ನೋದು ಇನ್ನಷ್ಟೇ ಹೊರಬೀಳಬೇಕಿದೆ. ಆದರೆ, ಪೋಸ್ಟರ್ ಅನ್ನು ನೋಡಿದರೆ, ಮಾಡರ್ನ್ ಯುವತಿಯಾಗಿ ಕಾಣಿಸಿಕೊಳ್ಳುತ್ತಿರುವಂತೆ ಕಾಣುತ್ತಿದೆ.

## ಗಣೇಶ್‌ಗೀಗ ಮತ್ತೆ ಗೋಲ್ಡನ್ ಟೈಮ್.. ಕೈಯಲ್ಲಿರೋ ಸಿನಿಮಾಗಳಿವೇನೆ!

### ಮಳೆ ಹುಡುಗನ ಭರ್ಜರಿ ಲೈನ್‌ಅಪ್

ಕನ್ನಡ ಚಿತ್ರರಂಗದ ಗೋಲ್ಡನ್ ಸ್ಟಾರ್, ಮಳೆ ಹುಡುಗ ಅಂತಲೇ ಜನಪ್ರಿಯರಾಗಿರುವ ಗಣೇಶ್ ತಮ್ಮ ವಿಶಿಷ್ಟ ಮ್ಯಾನರಿಸಂ, ಟೈಮಿಂಗ್‌ನಿಂದ ಹಾಗೂ ರೋಮ್ಯಾಂಟಿಕ್ ಡೈಲಾಗ್‌ಗಳ ಮೂಲಕ ಅಪಾರ ಅಭಿಮಾನಿಗಳನ್ನು ಗಳಿಸಿದ್ದಾರೆ. ಗೋಲ್ಡನ್ ಸ್ಟಾರ್ ಗಣೇಶ್ ಕಳೆದ ಎರಡು ದಶಕಗಳಿಂದ ತಮ್ಮ ಶೈಲಿಯಲ್ಲಿ ಪ್ರೇಕ್ಷಕರನ್ನು ರಂಜಿಸುತ್ತಾ ಬಂದಿದ್ದಾರೆ. ಸದ್ಯ ಅವರಿಗೆ 47ನೇ ವರ್ಷ ಗೋಲ್ಡನ್ ಟೈಮ್.

**ಗಣೇಶ್ ಸಿನಿಮಾಗಳ ಕಂಪ್ಲೀಟ್ ಡಿಟೇಲ್ಸ್:** ಬಹದ್ದೂರ್ ಚೇತನ್ ನಿರ್ದೇಶನದ ಸಿನಿಮಾ: ಬಹದ್ದೂರ್, ಭರ್ಜರಿ ಹಾಗೂ ಭರಾಟೆ ಅಂತಹ ಸಕ್ಸಸ್‌ಫುಲ್ ಸಿನಿಮಾಗಳನ್ನು ಕೊಟ್ಟಿರುವ ನಿರ್ದೇಶಕ ಬಹದ್ದೂರು ಚೇತನ್. ಮಾಸ್ ಆ್ಯಕ್ಷನ್ ಸಿನಿಮಾಗಳ ನಿರ್ದೇಶಕ ಚೇತನ್ ಕುಮಾರ್ ಮತ್ತು ಗೋಲ್ಡನ್ ಸ್ಟಾರ್ ಗಣೇಶ್ ಕಾಂಬಿನೇಷನ್‌ನಲ್ಲಿ ಸಿನಿಮಾವೊಂದು ಬರುತ್ತಿದೆ. ಗಣೇಶ್ ಕ್ಲಾಸ್ ಇಮೇಜ್‌ಗೆ ತಕ್ಕಂತೆ ಚೇತನ್ ಮಾಸ್ ಎಲಿಮೆಂಟ್ಸ್ ಸೇರಿಸಿ ಸಿನಿಮಾ ಮಾಡುತ್ತಿದ್ದಾರೆ. ಸದ್ಯಕ್ಕಿನ್ನೂ ಟೈಟಲ್ ಅನೌನ್ಸ್‌ಮೆಂಟ್ ಆಗಿಲ್ಲ. ಇದು ಸ್ಯಾಂಡಲ್‌ವುಡ್ ಬಾಕ್ಸ್ ಆಫೀಸ್‌ನಲ್ಲಿ ಧೂಳೆಬ್ಬಿಸುವ ಎಲ್ಲಾ ಸಾಧ್ಯತೆಗಳಿವೆ.



**ಬೃಂದಾವಿಹಾರಿ:** ಕೃಷ್ಣಂ ಪ್ರಣಯ ಸಖಿ ಸಿನಿಮಾದ ಯಶಸ್ಸಿನ ಬಳಿಕ ಇದೇ ಕಾಂಬಿನೇಷನ್‌ನಲ್ಲಿ ಬರುತ್ತಿರುವ ಮತ್ತೊಂದು ಸಿನಿಮಾ ಬೃಂದಾವಿಹಾರಿ. ಗಣೇಶ್ ಹಾಗೂ ನಿರ್ದೇಶಕ ಶ್ರೀನಿವಾಸ್ ರಾಜು ಅವರ ಕಾಂಬಿನೇಷನ್ ಮತ್ತೆ ಮೋಡಿ ಮಾಡುತ್ತಾ ಅನ್ನೋ ಕುತೂಹಲ ದುಪ್ಪಟ್ಟಾಗಿದೆ. ಗಣೇಶ್ ಮತ್ತೆ ರೋಮ್ಯಾಂಟಿಕ್ ಲವರ್ ಬಾಯ್ ಅವತಾರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಈಗಾಗಲೇ ರಿಲೀಸ್ ಆಗಿರೋ ಹಾಡುಗಳು ಇದೊಂದು ಅಪ್ಪಟ ಪ್ರೇಮಕಥೆ ಅನ್ನೋದನ್ನು ರಿವೀಲ್ ಮಾಡಿವೆ.

**ಜಾಂಗೋ ಕೃಷ್ಣಮೂರ್ತಿ:** ಅರಸು ಅಂತಾರೆ ನಿರ್ದೇಶನದ ಸಿನಿಮಾ ಕೆಲವು ತಿಂಗಳ ಹಿಂದಷ್ಟೇ ಸೆಟ್ಟೇರಿತ್ತು. ಅರಸು ಅಂತಾರೆ ಹಾಗೂ ಗಣೇಶ್ ಜೋಡಿಯ ಈ ಸಿನಿಮಾಗೆ ಜಾಂಗೋ ಕೃಷ್ಣಮೂರ್ತಿ ಎಂದು ಟೈಟಲ್ ಕೂಡ ಇಡಲಾಗಿತ್ತು. ಇದು ಗಣೇಶ್ ವೃತ್ತಿ ಬದುಕಿನಲ್ಲೇ ವಿಭಿನ್ನ ಸಿನಿಮಾ ಎನ್ನಲಾಗಿತ್ತು. ಸದ್ಯಕ್ಕೆ ಈ ಸಿನಿಮಾದ ಶೂಟಿಂಗ್‌ಗೆ ಬ್ರೇಕ್ ಬಿದ್ದಿದೆ ಎನ್ನಲಾಗಿದೆ. ಶೀಘ್ರದಲ್ಲಿಯೇ ಮತ್ತೆ ಆರಂಭ ಆಗಬಹುದು.

**ಪಿನಾಕ:** ಗಣೇಶ್ ಕರಿಯರ್‌ನ ಮತ್ತೊಂದು ವಿಭಿನ್ನ ಸಿನಿಮಾ ಪಿನಾಕ. ಇದೊಂದು ಹೈ-ವೋಲ್ಟೇಜ್ ಆ್ಯಕ್ಷನ್ ಗ್ರಾಫಿಕ್ಸ್ ಓರಿಯೆಂಟೆಡ್ ಸಿನಿಮಾ. ಸಸ್ಪೆನ್ಸ್ ಥ್ರಿಲ್ಲರ್ ಶೈಲಿಯ ಈ ಸಿನಿಮಾದಲ್ಲಿ ಗಣೇಶ್ ಅವರನ್ನು ಬೇರೆ ಅವತಾರದಲ್ಲಿ ನೋಡಬಹುದು.

**ತಮ್ಮ ಸುಖಾಗಮನ ಬಯಸುವ:** ಅಪ್ಪಟ ಕನ್ನಡ ಶೀರ್ಷಿಕೆಯ ಈ ಸಿನಿಮಾವನ್ನು ರಾಮೇನಹಳ್ಳಿ ಜಗನ್ನಾಥ್ ನಿರ್ದೇಶನ ಮಾಡುತ್ತಿದ್ದಾರೆ. ಗಣೇಶ್ ಅವರ ಸಿಗ್ನೇಚರ್ ಶೈಲಿಯ ಎಮೋಷನಲ್ ಡ್ರಾಮಾ ಇದ್ದಾಗಿದ್ದು, ಚಿತ್ರೀಕರಣದ ಹಂತದಲ್ಲಿ ಇದೆ.

**ಯುವರ್ಸ್ ಸಿನ್ಸಿಯರ್ಲಿ ರಾಮ್:** ಗಣೇಶ್-ರಮೇಶ್ ಕಾಂಬಿನೇಷನ್ ಸಿನಿಮಾ ಯುವರ್ಸ್ ಸಿನ್ಸಿಯರ್ಲಿ ರಾಮ್. ವಿಖ್ಯಾತ್ ಈ ಸಿನಿಮಾವನ್ನು ನಿರ್ದೇಶನ ಮಾಡುತ್ತಿದ್ದು, ಇನ್ನೂ ಶೂಟಿಂಗ್ ಹಂತದಲ್ಲಿಯೇ ಇದೆ. ಸ್ಯಾಂಡಲ್‌ವುಡ್ ಮೂಲಗಳ ಪ್ರಕಾರ ಕೆಲವು ತಿಂಗಳಿಂದ ಶೂಟಿಂಗ್ ಸ್ಥಗಿತಗೊಂಡಿದ್ದು, ಶೀಘ್ರದಲ್ಲಿಯೇ ಶುರುವಾಗುವ ಸಾಧ್ಯತೆಯಿದೆ.

**ಬರ್ತ್‌ಡೇಗೆ ಹೊಸ ಸಿನಿಮಾ ಅನೌನ್ಸ್: ಇನ್‌ಸೈಡ್ ಟಾಕ್:** ಗೋಲ್ಡನ್‌ಸ್ಟಾರ್ ಗಣೇಶ್ ಸಿನಿಮಾ ಈಗಾಗಲೇ 6 ಸಿನಿಮಾಗಳು ಅನೌನ್ಸ್ ಆಗಿವೆ. ಇದೆಲ್ಲದೆ ಇನ್ನೂ ಮೂರು ಸಿನಿಮಾಗಳು ಮೊನ್ನೆ (ಜುಲೈ 2) ಅನೌನ್ಸ್ ಆಗುವ ಸಾಧ್ಯತೆಯಿದೆ. ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಈಗಾಗಲೇ ಟಾಕ್‌ನಲ್ಲಿರುವ ಸಿನಿಮಾಗಳ ಅನೌನ್ಸ್ ಮೆಂಟ್ ಮಾಡಬಹುದೆಂಬ ನಿರೀಕ್ಷೆಯಿದೆ.

# ಯೋಗ, ಧ್ಯಾನ ರೂಢಿಸಿಕೊಂಡರೆ ಆರೋಗ್ಯ ವೃದ್ಧಿ

## ಪ್ರತಿನಿತ್ಯ ಮುಂಜಾನೆ ದೈಹಿಕ ಚಟುವಟಿಕೆ ಅತ್ಯಗತ್ಯ: ತಾಲ್ಲೂಕು ಆರೋಗ್ಯ ವೈದ್ಯಾಧಿಕಾರಿ ಡಾ.ಪಿ.ತೇಜಸ್ವಿನಿ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಆರೋಗ್ಯವನ್ನು ವೃದ್ಧಿಸಿಕೊಳ್ಳುವ ನಿಟ್ಟಿನಲ್ಲಿ ಯೋಗ ಹಾಗೂ ಧ್ಯಾನವನ್ನು ದೈನಂದಿನ ಚಟುವಟಿಕೆಯಾಗಿ ರೂಢಿಸಿಕೊಳ್ಳಬೇಕು ಎಂದು ತಾಲ್ಲೂಕು ಆರೋಗ್ಯ ವೈದ್ಯಾಧಿಕಾರಿ ಡಾ.ಪಿ.ತೇಜಸ್ವಿನಿ ಅವರು ಹೇಳಿದರು.




ಪಟ್ಟಣದಲ್ಲಿ ರೋಟರಿ ಕ್ಲಬ್ ವತಿಯಿಂದ ವೈದ್ಯರ ದಿನಾಚರಣೆ, ಲೆಕ್ಕ ಪರಿಶೋಧಕರ ದಿನಾಚರಣೆ ಹಾಗೂ ಪತ್ರಕರ್ತರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ರೋಟರಿ ಸಂಸ್ಥೆಯು ಜನರ ಆರೋಗ್ಯ ಶಿಕ್ಷಣ ಹಾಗೂ ಪ್ರಕೃತಿ ಉಳಿಸುವಂತಹ ಸಾಮಾಜಿಕ ಕಾರ್ಯಕ್ರಮಗಳನ್ನು ಮಾಡಿಕೊಂಡು ಬರುತ್ತಿರುವುದು ಶ್ಲಾಘನೀಯವಾದ ಕಾರ್ಯವಾಘಿದೆ ಎಂದು ಶ್ಲಾಘಿಸಿದರು.

ಆರೋಗ್ಯ ತಪಾಸಣೆ ಇನ್ನಿತರೆ ಕಾರ್ಯಕ್ರಮಗಳನ್ನ ಹಮ್ಮಿಕೊಂಡಿದೆ. ಇಂದಿನ ಜಂಜಾಟದ ಜೀವನದಲ್ಲಿ ಎಲ್ಲರೂ ಕೂಡ ಪ್ರತಿನಿತ್ಯ ಮುಂಜಾನೆ ಒಂದು ಗಂಟೆ ವೇಗದ ನಡಿಗೆ, ಯೋಗ, ಧ್ಯಾನ ಹಾಗೂ ಪ್ರತಿಯೊಬ್ಬರೂ ದೈಹಿಕ ಚಟುವಟಿಕೆಗಳಲ್ಲಿ ತೊಡಗಿ ಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಲೆಕ್ಕ ಪರಿಶೋಧಕ ಸಿ.ಕೆ.ಪದ್ಮನಾಭ ಅವರು ಸನ್ಮಾನ ಸ್ವೀಕರಿಸಿ ಮಾತನಾಡಿ, ದೇಶದ ಆರ್ಥಿಕ ಅಭಿವೃದ್ಧಿಯಲ್ಲಿ ಲೆಕ್ಕಪರಿಶೋಧಕರ ಪಾತ್ರ ಮುಖ್ಯವಾಗಿದ್ದು, ನಮ್ಮ ದೇಶದಲ್ಲಿ ಲೆಕ್ಕ ಪರಿಶೋದಕರೊಂದಿಗೆ ಚರ್ಚಿಸಿ ಕೆಲವು ಆರ್ಥಿಕ ನೀತಿಗಳನ್ನು ರೂಪಿಸಲಾಗುತ್ತಿದೆ. ಲೆಕ್ಕ ಪರಿಶೋಧನೆಗೆ ಸಿ.ಎ. ಗಳು ಸಹಿ ಹಾಕಿದ್ದಾರೆ ಎಂದರೆ ಅದು ಎಲ್ಲವನ್ನು ಪರಿಶೀಲಿಸಿ ಹಾಕಿದ್ದಾರೆ ಎಂದು ಅರ್ಥವಾಗುತ್ತದೆ. ಈ ದಿನ ನನಗೆ ಗೌರವಿಸಿರುವುದು ವೈಯಕ್ತಿಕವಾಗಿ ಖುಷಿ ಕೊಡುವುದರ ಜೊತೆಗೆ ನನ್ನ ವೃತ್ತಿಗೆ ಗೌರವಿಸಿದಂತೆ ಆಗಿದೆ ಎಂದು ಅವರು ಸಂತಸ ವ್ಯಕ್ತಪಡಿಸಿದರು.

ಇತ್ತೀಚಿನ ದಿನಗಳಲ್ಲಿ ಜನರು ಸೋಂಬೇರಿಗಳಾಗುತ್ತಿದ್ದಾರೆ. ಹಾಗಾಗಿಯೇ ಜನರಲ್ಲಿ ವಿವಿಧ ರೋಗಗಳು ಮನೆ ಮಾಡುತ್ತಿದ್ದು, ದಿನಕ್ಕೆ ಒಂದು ಗಂಟೆಯಾದರೂ ದೈಹಿಕ ಚಟುವಟಿಕೆ ಅತ್ಯಗತ್ಯ ಎಂದು ತಿಳಿಸಿದರು.

ತಾಲ್ಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ದಯಾನಂದ ಶೆಟ್ಟಿಹಳ್ಳಿ ಮಾತನಾಡಿ, ಕೆಲವರು ಸಮಾಜ ಸೇವೆಯಯ ನೆಪದಲ್ಲಿ ತಮ್ಮ ಸ್ವಾರ್ಥ ಉಪಯೋಗಿಸಿ ಸೋಗಲಾಡಿಗಳಾಗಿದ್ದಾರೆ. ಇಂತಹವರು ಸಮಾಜಕ್ಕೆ ಮಾರಕ. ಯಾವುದೇ ವ್ಯಕ್ತಿ ಸಮಾಜಕ್ಕೆ ಪೂರಕವಾಗಿರಬೇಕೆ ಹೊರತು ಮಾರಕವಾಗಿರಬಾರದು. ವ್ಯಕ್ತಿಯ ಆರೋಗ್ಯಕ್ಕೆ ವೈದ್ಯರ ಅವಶ್ಯಕತೆ ಇದೆ, ದೇಶದ ಆರ್ಥಿಕತೆ ಆರೋಗ್ಯಕ್ಕೆ ಲೆಕ್ಕಪರಿಶೋಧಕರ ಅಗತ್ಯವಿದೆ. ಅದೇ ರೀತಿ ಸಮಾಜದ ಆರೋಗ್ಯ ಸುಧಾರಿಸುವಲ್ಲಿ ಪತ್ರಕರ್ತರ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಇತ್ತೀಚೆಗೆ ಸೋಶಿಯಲ್ ಮೀಡಿಯಾ ಹಾಗೂ ಕೆಲವು ದೃಶ್ಯ ಮಾಧ್ಯಮಗಳು ಸುದ್ದಿ ಬಿತ್ತರಿಸುವ ಆತುರದಲ್ಲಿ ತಪ್ಪುಗಳನ್ನು ಬಿಂಬಿಸುತ್ತಿವೆ. ಆದರೆ, ಮುದ್ರಣ ಮಾಧ್ಯಮ ಇಂದಿಗೂ ಜನರ ಮನಸ್ಸಿನಲ್ಲಿ ನಂಬಿಕೆಯನ್ನು ಉಳಿಸಿಕೊಂಡಿದೆ. ದೃಶ್ಯ ಮಾಧ್ಯಮಗಳಲ್ಲಿ ಅದೆಷ್ಟೇ ನೋಡಿದರೂ ಮರು ದಿನ ಬೆಳಗ್ಗೆ ಪತ್ರಿಕೆಯಲ್ಲಿ ಓದಿ ಸ್ಪಷ್ಟಪಡಿಸಿಕೊಳ್ಳುವ ರೂಢಿ ಹಾಗೂ ನಂಬಿಕೆ ಇನ್ನೂ ಜನರಲ್ಲಿ ಜೀವಂತವಾಗಿ ಉಳಿದಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಂಡಿದ್ದ ರೋ. ಎಚ್.ಎನ್. ಶಿವನಂಜೇಗೌಡ ಅವರು ಮಾತನಾಡಿ, ಈ ವರ್ಷ ನಮ್ಮ ರೋಟೆರಿಯನ್ ಮೂರು ಧ್ಯೇಯಗಳನ್ನು ಹೊಂದಿದ್ದು ಡ್ರಗ್ ಮುಕ್ತ ಸಮಾಜ, ಮಕ್ಕಳ ಅಪೌಷ್ಟಿಕತೆಯನ್ನು ಹೋಗಲಾಡಿಸುವುದು ಹಾಗೂ ಪ್ರಾಕೃತಿಕ ಸಂಪತ್ತನ್ನು ಉಳಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದೆ ಎಂದರು.

ಬಿ.ವಿ. ವಿಜಯ್, ಎಸ್.ಆರ್. ಮಧು, ಸುಂದರೇಶ್, ಡಾ. ಸಿ.ಎಲ್. ನವೀನ್, ಕಾರ್ಯದರ್ಶಿ ಬಿ.ಪಿ. ಹರೀಶ್, ಇನ್ನಿತರರು ಹಾಜರಿದ್ದರು.

## ರಾಜ್ಯ ಸರ್ಕಾರದ ನಿರ್ಧಾರಕ್ಕೆ ತೀವ್ರ ಹಿನ್ನಡೆ

# ಕ್ರಿಮಿನಲ್ ಪ್ರಕರಣ ವಾಪಸಾತಿಗೆ ಹೈಕೋರ್ಟ್ ತಡೆ

• ಪ್ರಜೋದಯ ವರದಿ

**ಬೆಂಗಳೂರು: ಸುಮಾರು** 52 ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆದ ರಾಜ್ಯ ಸರ್ಕಾರದ ಕ್ರಮಕ್ಕೆ ಹೈಕೋರ್ಟ್ ವಿಭಾಗೀಯ ಪೀಠ ತಡೆ ಮಧ್ಯಂತರ ತಡೆಯಾಜ್ಞೆ ನೀಡಿದೆ. ಇದರಿಂದಾಗಿ ರಾಜ್ಯ ಸರ್ಕಾರಕ್ಕೆ ತೀವ್ರ ಹಿನ್ನಡೆಯಾದಂತಾಗಿದೆ.



ಸಚಿವ ಯು.ಟಿ.ಖಾದರ್ ಶಿಫಾರಸು ಮೇರೆಗೆ ಕೆಲವು ಪ್ರಕರಣಗಳನ್ನು ಹಿಂಪಡೆಯಲಾಗಿತ್ತು. ಕಲಬುರಗಿ ಜಿಲ್ಲೆಯ ಲಾಡ್ಲೆ ಮಶಾಕ್ ದರ್ಗಾ ಗಲಭೆ ಕೇಸ್, ಕೋಮುಗಲಭೆ ಕೇಸ್‌ಗಳೂ ಸೇರಿ 52 ಪ್ರಕರಣ ವಾಪಸಾತಿಗೆ ನಿರ್ಧರಿಸಲಾಗಿತ್ತು. ಆದರೆ 2026 ಮೇ 27ರ ರಾಜ್ಯ ಸರ್ಕಾರದ ತೀರ್ಮಾನಕ್ಕೆ ಇದೀಗ ಹೈಕೋರ್ಟ್ ಬ್ರೇಕ್ ಹಾಕಿದೆ.

ಕೋಮು ಗಲಭೆ ಆರೋಪಿಗಳ ಪರ ಯು.ಟಿ.ಖಾದರ್ ಶಿಫಾರಸು ಆರೋಪ ಸಂಬಂಧ ಯು.ಟಿ. ಖಾದರ್‌ಗೆ ನೋಟಿಸ್ ನೀಡಲು ಹೈಕೋರ್ಟ್ ನಕಾರ ವ್ಯಕ್ತಪಡಿಸಿದ್ದು, ಗೃಹ ಇಲಾಖೆ ಮತ್ತು ಅಭಿಯೋಜನೆ ಇಲಾಖೆಗೆ ನೋಟಿಸ್ ನೀಡಿದೆ.

**2 ವಾರಗಳೊಳಗೆ ಉತ್ತರ ಸಲ್ಲಿಸಲು ನಿರ್ದೇಶನ**

ರಾಜ್ಯ ಸರ್ಕಾರ ಹೊರಡಿಸಿರುವ ಆದೇಶವು ಇದೇ ರೀತಿಯ ಅಧಿಸೂಚನೆಯನ್ನು ರದ್ದುಗೊಳಿಸಿದ್ದ ಹೈಕೋರ್ಟ್‌ನ ಹಿಂದಿನ ತೀರ್ಪಿಗೆ ಪ್ರಾಥಮಿಕ ದೃಷ್ಟಿಯಿಂದ ವಿರುದ್ಧವಾಗಿದೆ ಎಂದು ಮುಖ್ಯ ನ್ಯಾಯಮೂರ್ತಿ ವಿಬು ಬಖ್ರು ಹಾಗೂ ನ್ಯಾಯಮೂರ್ತಿ ಕೆ.ಎಸ್. ಹೇಮಲೇಖಾ ಅವರ ವಿಭಾಗೀಯ ಪೀಠ ಅಭಿಪ್ರಾಯಪಟ್ಟಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಹಾಗೂ ಪ್ರಾಸಿಕ್ಯೂಷನ್ ನಿರ್ದೇಶನಾಲಯಕ್ಕೆ ನೀಡಲಾದ ನೋಟಿಸ್‌ಗೆ ಎರಡು ವಾರಗಳೊಳಗೆ ಉತ್ತರ ಸಲ್ಲಿಸುವಂತೆ ನಿರ್ದೇಶನ ನೀಡಿದೆ.

ಈ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಗಿರೀಶ್ ಭಾರದ್ವಾಜ್ ಎಂಬವರು ಸಲ್ಲಿಸಿದ್ದರು. ಅರ್ಜಿದಾರರ ಪರವಾಗಿ ಹಾಜರಾದ ವಕೀಲ ವೆಂಕಟೇಶ್ ಪಿ.ದಳವಾಯಿ, ಅಪರಾಧ ಪ್ರಕ್ರಿಯಾ ಸಂಹಿತೆ, 1973ರ ಸೆಕ್ಷನ್ 321ರ ಅಡಿಯಲ್ಲಿ ಸರ್ಕಾರಿ ಅಭಿಯೋಜಕರಿಗೆ ಇರುವ ಸ್ವತಂತ್ರ ವಿವೇಚನಾ ಅಧಿಕಾರವನ್ನು ಕಾರ್ಯಾಂಗವು ಕಸಿದುಕೊಂಡಿದೆ ಎಂದು ವಾದಿಸಿದ್ದರು. ಅಲ್ಲದೆ, ಪ್ರಕರಣ ಹಿಂಪಡೆಯುವ ನಿರ್ಧಾರವು ಯಾವುದೇ ಸಾರ್ವಜನಿಕ ಹಿತಾಸಕ್ತಿಯ ಆಧಾರದ ಮೇಲೆ ತೆಗೆದುಕೊಳ್ಳಲಾಗಿಲ್ಲ ಎಂದು ಅವರು ನ್ಯಾಯಾಲಯದ ಗಮನಕ್ಕೆ ತಂದಿದ್ದರು.

**ಕಾನೂನು ಮೀರಿ ಆದೇಶ ಮಾಡಿಲ್ಲ**

ಇನ್ನು 52 ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆದ ಕ್ರಮಕ್ಕೆ ತಡೆ ವಿಚಾರ ಸಂಬಂಧ ಪ್ರತಿಕ್ರಿಯಿಸಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಕೋರ್ಟ್ ಆದೇಶದ ಕಾಪಿ ಸಿಕ್ಕಿದ ಬಳಿಕ ಚರ್ಚೆ ಮಾಡುತ್ತೇವೆ. ಆ ಪ್ರಕರಣಗಳಲ್ಲಿ ಬಿಜೆಪಿ ನಾಯಕರ ಕೇಸ್ ಕೂಡ ಸೇರಿವೆ. ಕಾನೂನು ಮೀರಿ ನಾವು ಆದೇಶ ಮಾಡಿಲ್ಲ. ಕಾನೂನು ಚೌಕಟ್ಟಿನಲ್ಲೇ ಸಂಪುಟದಲ್ಲಿ ನಿರ್ಧಾರ ಮಾಡಲಾಗಿತ್ತು ಎಂದಿದ್ದಾರೆ.

# ಆತ್ಮವಿಶ್ವಾಸದ ಮೊದಲ ಹೆಜ್ಜೆ ಅಕ್ಷರಾಭ್ಯಾಸ

• ಪ್ರಜೋದಯ ವರದಿ

**ಹಾಸನ:** ಮಗುವಿನಲ್ಲಿ ಭಾಷಾ ಸಾಮರ್ಥ್ಯ ಜ್ಞಾನದ ವಿಸ್ತರಣೆ ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸಲು ಇಡುವ ಮೊದಲ ಹೆಜ್ಜೆ ವಿದ್ಯಾರಂಭಂ ಅಥವಾ ಅಕ್ಷರಭ್ಯಾಸ ಎಂದು ಟೈಮ್ಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ.ಕೆ. ಟೈಮ್ಸ್ ಗಂಗಾಧರ್ ಅವರು ಅಭಿಪ್ರಾಯಪಟ್ಟರು.



ನಗರದ ಸೀತಾರಾಮಂಜನೇಯ ದೇವಸ್ಥಾನದಲ್ಲಿ ಈಚೆಗೆ ವಿಜಯನಗರ ಬಡಾವಣೆಯಲ್ಲಿರುವ ಟೈಮ್ಸ್ ಅಂತರಾಷ್ಟ್ರೀಯ ಶಾಲೆ ವತಿಯಿಂದ ನಡೆದ ವಿದ್ಯಾರಂಭಂ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಭಾರತೀಯ ಸಂಸ್ಕೃತಿ ಹಾಗೂ ಪರಂಪರೆ ಅನನ್ಯ ಹಾಗೂ ಅಜರಾಮರವಾಗಿದೆ ಎಂದು ತಿಳಿಸಿದರು.

ಈ ಹಿನ್ನೆಲೆಯಲ್ಲಿ ಶಿಕ್ಷಣ ಕಲಿಯಲು ಹೊಸದಾಗಿ ಆಗಮಿಸಿರುವ ಪುಟಾಣಿ ಮಕ್ಕಳಿಗೆ ಅಕ್ಷರಭ್ಯಾಸ ಹಮ್ಮಿಕೊಂಡಿದ್ದು, ನಮ್ಮ ಮಕ್ಕಳಿಗೆ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರಗಳನ್ನು ಕಲಿಸಿ ದೇಶದ ಸುಸಂಸ್ಕೃತ ಪ್ರಜೆಗಳನ್ನಾಗಿ ನಿರ್ಮಿಸುತ್ತೇವೆ. ಅಕ್ಷರಭ್ಯಾಸವು ಜ್ಞಾನದ ಅಧಿದೇವತೆಯಾದ ಸರಸ್ವತಿ ದೇವಿಯ ಆಶೀರ್ವಾದದೊಂದಿಗೆ ಮಗು ಅಕ್ಷರ ಲೋಕಕ್ಕೆ ಕಾಲಿಡುವ ಶುಭಗಳಿಗೆಯಾಗಿದೆ. ಅಕ್ಷರಗಳ ಜಗತ್ತಿಗೆ ಹೆಜ್ಜೆ ಇಡುತ್ತಿರುವ ನಿಮ್ಮ ಪುಟ್ಟ ಕಂದನಿಗೆ ಜ್ಞಾನ, ಬುದ್ಧಿ ಮತ್ತು ಯಶಸ್ಸು ಲಭಿಸಲಿ ಎಂದು ಗಂಗಾಧರ್ ಅವರು ಹಾರೈಸಿದರು.

ಶೈಕ್ಷಣಿಕ ಬದುಕಿಗೆ ಮೊದಲ ಹೆಜ್ಜೆ ಇಡುತ್ತಿರುವ ಮುಗ್ಧ ಮನಸ್ಸಿನ ಮುದ್ದು ಪುಟಾಣಿ ಮಕ್ಕಳನ್ನು ತಂದೆ-ತಾಯಿಯ ಮಡಿಲಿನಲ್ಲಿ ಕೂರಿಸಿ ಅಕ್ಷರ ಬರೆಸುವುದರ ಮೂಲಕ ತಾಯಿ ಶಾರದಾ ಮಾತೆಯ ಆಶೀರ್ವಾದ ಬೇಡಿ ಮಕ್ಕಳನ್ನು ಹರಸಿ, ಹಾರೈಸಲಾಯಿತು.

## ಫಸಲ್ ವಿಮಾ ಯೋಜನೆಗೆ ನೊಂದಣಿ

• ಪ್ರಜೋದಯ ವರದಿ

**ಆಲೂರು:** ತಾಲ್ಲೂಕು ವ್ಯಾಪ್ತಿಯಲ್ಲಿ ಅನಿಶ್ಚಿತ ಕೃಷಿಯಲ್ಲಿ ನಿಶ್ಚಿತ ಆದಾಯ ತರುವ ಉದ್ದೇಶದಿಂದ ಇಫ್ಕೋ ಟೋಕಿಯೊ ಜನರಲ್ ಕಂಪನಿ ಲಿಮಿಟೆಡ್ ಬೆಂಗಳೂರು ಇವರ ಸಹಯೋಗದೊಂದಿಗೆ 2026-27 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಹೋಬಳಿ ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ, ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ತಾಲ್ಲೂಕಿನಲ್ಲಿ ರೈತರು ಬೆಳೆಯುವ ಮುಸುಕಿನ ಜೋಳ ಮತ್ತು ಭತ್ತ ಬೆಳೆಗಳಿಗೆ ರೈತರ ಅರ್ಜಿಯೊಂದಿಗೆ ಭೂಮಿ ದಾಖಲೆಗಳಾದ ಪಹಣಿ/ಕಂದಾಯ ರಶೀದಿ/ಖಾತೆ ಪುಸ್ತಕ/ಬ್ಯಾಂಕ್ ಪಾಸ್ ಪುಸ್ತಕ ಮತ್ತು ಆಧಾರ್ ಕಾರ್ಡ್ ದಾಖಲೆಗಳೊಂದಿಗೆ ಹತ್ತಿರದ ಬ್ಯಾಂಕ್, ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಬೆಳೆ ವಿಮೆಗೆ ನೊಂದಾಯಿಸಿಕೊಳ್ಳಬಹುದಾಗಿದೆ.



ಪ್ರತಿ ಎಕರೆಗೆ ರೈತರು ಮುಸುಕಿನ ಜೋಳ (ಮಳೆಯಾಶ್ರಿತ)- ರೂ. 546. ಬೆಳೆಗೆ ನೊಂದಾಯಿಸಲು ಜೂ.31 ಅಂತಿಮ ದಿನಾಂಕವಾಗಿರುತ್ತದೆ. ಭತ್ತ (ನೀರಾವರಿ)- 879 ರೂ.ಗಳಾಗಿದ್ದು, ಬೆಳೆಗಳಿಗೆ ನೊಂದಾಯಿಸಲು ಆ.14 ಅಂತಿಮ ದಿನಾಂಕವಾಗಿರುತ್ತದೆ.

ಭತ್ತ (ಮಳೆಯಾಶ್ರಿತ) 612 ರೂ., ಬೆಳೆಗಳಿಗೆ ನೊಂದಾಯಿಸಲು ಜೂ. 31 ಅಂತಿಮ ದಿನಾಂಕವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ರೈತರು ಬೆಳೆ ವಿಮಾ ಸಂಸ್ಥೆ, ಕೃಷಿ ಇಲಾಖೆ/ರೈತ ಸಂಪರ್ಕ ಕೇಂದ್ರಗಳು, ತೋಟಗಾರಿಕೆ ಇಲಾಖೆ ಹಾಗೂ ಬೆಳೆ ಸಾಲ ನೀಡುವ ಬ್ಯಾಂಕ್ ಅಥವಾ ಸಹಕಾರಿ ಬ್ಯಾಂಕ್‌ಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಎಂ.ಡಿ.ಮನು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಮರನಾಥ ಯಾತ್ರೆಗೆ ಅಧಿಕೃತ ಚಾಲನೆ

ಜಮ್ಮು ಕಾಶ್ಮೀರ: ದೇಶದ ಅತ್ಯಂತ ಪವಿತ್ರ ತೀರ್ಥಯಾತ್ರೆಗಳಲ್ಲಿ ಒಂದೆಂದು ಪರಿಗಣಿಸಲಾದ ಅಮರನಾಥ ಯಾತ್ರೆ ಜುಲೈ 2 ರಂದು ಪ್ರಾರಂಭವಾಗಿದೆ.

ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಭಗವತಿ ನಗರ ಮೂಲ ಶಿಬಿರದಿಂದ ಅಮರನಾಥ ಯಾತ್ರೆ 2026 ರ ಮೊದಲ ಬ್ಯಾಚ್‌ಗೆ ಚಾಲನೆ ನೀಡಿದ್ದಾರೆ.

''ಬಂ ಬಂ ಭೋಲೆ'' ಮತ್ತು ''ಹರ ಹರ ಮಹಾದೇವ್'' ಘೋಷಣೆಗಳ ನಡುವೆ, ನೈಸರ್ಗಿಕ ಹಿಮ ಶಿವಲಿಂಗದ ದರ್ಶನ ಪಡೆಯಲು ಮೊದಲ ಬ್ಯಾಚ್ ಕಾಶ್ಮೀರ ಕಣಿವೆಗೆ ಹೊರಟಿತು.

ಒಟ್ಟು 4,822 ಯಾತ್ರಿಕರು 259 ವಾಹನಗಳಲ್ಲಿ ಅಮರನಾಥ ಗುಹಾ ದೇಗುಲಕ್ಕೆ ಹೊರಟರು. ಈ ಯಾತ್ರಿಕರು ಪಹಲ್ಗಾಮ್ ಮತ್ತು ಬಾಲ್ಟಾಲ್ ಎಂಬ ಎರಡು ಮಾರ್ಗಗಳ ಮೂಲಕ ಪ್ರಯಾಣಿಸಲಿದ್ದಾರೆ.

## ಸಾರಿಗೆ ನೌಕರರ ಮೂಲ ವೇತನ ಶೇ.12.5 ಹೆಚ್ಚಳ

• ಪ್ರಜೋದಯ ವರದಿ

**ಬೆಂಗಳೂರು:** ಬಹುದಿನಗಳ ಬೇಡಿಕೆ ಈಡೇರಿಸಲು ಸ್ಪಂದಿಸಿರುವ ರಾಜ್ಯ ಸರ್ಕಾರ, ಸಾರಿಗೆ ನೌಕರರಿಗೆ ಸಿಹಿ ಸುದ್ದಿ ನೀಡಿದ್ದು, ಕೊನೆಗೂ ವೇತನ ಹೆಚ್ಚಳ ಮಾಡಿ ಆದೇಶ ಹೊರಡಿಸಿದೆ.




ಈ ತಿಂಗಳಿನಿಂದ ಸಾರಿಗೆ ನೌಕರರ ಮೂಲ ವೇತನ ಹೆಚ್ಚಳವಾಗಲಿದೆ. ಸರ್ಕಾರವು ನಾಲ್ಕು ಸಾರಿಗೆ ನಿಗಮಗಳಾದ ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ಎನ್‌ಡಬ್ಲ್ಯುಕೆಆರ್‌ಟಿಸಿ, ಮತ್ತು ಕೆಕೆಆರ್‌ಟಿಸಿ ನೌಕರರ ಮೂಲ ವೇತನವನ್ನು ಶೇ.12.5ರಷ್ಟು ಹೆಚ್ಚಿಸಿದೆ.

ಜುಲೈ ತಿಂಗಳ ವೇತನದಲ್ಲಿ ಪರಿಷ್ಕೃತ ವೇತನ ಜಾರಿಗೆ ಬರುವಂತೆ ಪಾವತಿಸಲು ಸರ್ಕಾರ ಆದೇಶ ಹೊರಡಿಸಿದ್ದು, ಹೊಸ ವೇತನ ಪರಿಷ್ಕರಣೆಯು 2025ರ ಏಪ್ರಿಲ್ 1ರಿಂದಲೇ ಪೂರ್ವಾನ್ವಯವಾಗುವಂತೆ ಜಾರಿಗೆ ಬಂದಿದೆ. ಈಗಾಗಲೇ ನೌಕರರಿಗೆ ಪಾವತಿಸಬೇಕಿದ್ದ ಹಳೆಯ ವೇತನ ಹಿಂಬಾಕಿಯ ಮೊದಲ ಕಂತಿನ ಹಣವನ್ನು ಸರ್ಕಾರವು ಬಿಡುಗಡೆ ಮಾಡಿದೆ.

ಈ ಹೆಚ್ಚಳದಿಂದಾಗಿ ರಾಜ್ಯದ ಸುಮಾರು 1.05 ಲಕ್ಷ ಸಾರಿಗೆ ನೌಕರರಿಗೆ ಅನುಕೂಲವಾಗಲಿದೆ. ಇದರಿಂದ ಸರ್ಕಾರಕ್ಕೆ ತಿಂಗಳಿಗೆ ಹೆಚ್ಚುವರಿಯಾಗಿ 72.80 ಕೋಟಿ ರೂ. ವೆಚ್ಚವಾಗಲಿದೆ.

ರಾಮಲಿಂಗಾರೆಡ್ಡಿ ಸಾರಿಗೆ ಸಚಿವರಾಗಿದ್ದಾಗ ಸಾರಿಗೆ ನೌಕರರ ವೇತನ ಹೆಚ್ಚಳಕ್ಕೆ ಆದೇಶ ನೀಡಿದ್ದರು. ಈ ತಿಂಗಳಿನಿಂದ ಸಾರಿಗೆ ನೌಕರರ ಅಕೌಂಟ್‌ಗೆ ಪರಿಷ್ಕೃತ ವೇತನ ಜಮೆಯಾಗಲಿದೆ.

# ಸರ್ಕಾರದ ವಿರುದ್ಧ ರೈತರು ದಂಗೆ ಏಳುತ್ತಾರೆ

• ಪ್ರಜೋದಯ ವರದಿ

**ಬೆಂಗಳೂರು:** ರೈತರು, ಕೃಷಿ ಕಾರ್ಮಿಕರು ಮತ್ತು ಗ್ರಾಮೀಣ ಜನರ ಬದುಕಿನೊಂದಿಗೆ ಚೆಲ್ಲಾಟವಾಡುವುದನ್ನು ನಿಲ್ಲಿಸಿ. ಈಗಲಾದರೂ ಎಚ್ಚೆತ್ತುಕೊಂಡು ಸಮರೋಪಾದಿಯಲ್ಲಿ ಬರ ನಿರ್ವಹಣಾ ಕಾರ್ಯ ಕೈಗೊಳ್ಳದಿದ್ದರೆ ಕಾಂಗ್ರೆಸ್ ಸರ್ಕಾರದ ವಿರುದ್ಧ ರೈತರು ದಂಗೆ ಏಳುವುದು ನಿಶ್ಚಿತ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಎಚ್ಚರಿಸಿದ್ದಾರೆ.



ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ರಾಜ್ಯ ಸರ್ಕಾರದ ವಿರುದ್ಧ ಪೋಸ್ಟ್ ಮಾಡಿರುವ ಅವರು, ಬರದ ಕರಿನೆರಳಲ್ಲಿ ಕರ್ನಾಟಕ, ಅಧಿಕಾರದ ಅಮಲಿನಲ್ಲಿ ಕಾಂಗ್ರೆಸ್ ಸರ್ಕಾರ ಎಂದು ಕಿಡಕಾರಿರುವ ಅವರು, ರಾಜ್ಯದ ರೈತರು, ಕೃಷಿ ಕಾರ್ಮಿಕರು ಹಾಗೂ ಗ್ರಾಮೀಣ ಜನತೆ ಭೀಕರ ಬರಗಾಲದ ಆತಂಕದಲ್ಲಿದ್ದರೂ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಮಾತ್ರ ಇನ್ನೂ ಕುಂಭಕರ್ಣ ನಿದ್ರೆಯಲ್ಲೇ ಮುಳುಗಿದೆ ಎಂದು ಆರೋಪಿಸಿದ್ದಾರೆ.

ಮುಂಗಾರು ಕೈಕೊಟ್ಟಿದೆ. ಜಲಾಶಯಗಳು ಬರಿದಾಗುತ್ತಿವೆ. ಬೆಳೆಗಳು ಕಣ್ಣೆದುರೇ ಒಣಗುತ್ತಿವೆ. ಕೃಷಿ ಕಾರ್ಮಿಕರಿಗೆ ಕೆಲಸವಿಲ್ಲದೆ ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದರೆ ಕಾಂಗ್ರೆಸ್ ಸರ್ಕಾರಕ್ಕೆ ರೈತರಿಗಿಂತ ಅಧಿಕಾರ, ರಾಜಕೀಯ, ಭ್ರಷ್ಟಾಚಾರವೇ ಮುಖ್ಯವಾಗಿದೆ. ರಾಜ್ಯದ 150ಕ್ಕೂ ಹೆಚ್ಚು ತಾಲ್ಲೂಕುಗಳಲ್ಲಿ ಬರದ ಛಾಯೆ ಆವರಿಸಿದೆ. ಬೆಳಗಾವಿ, ಬಾಗಲಕೋಟೆ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಜಲಾಶಯಗಳು ಬರಿದಾಗುತ್ತಿದ್ದು, ಕುಡಿಯುವ ನೀರಿನ ಬಿಕ್ಕಟ್ಟು ಆರಂಭವಾಗಿದೆ ಎಂದು ಆತಂಕ ಹೊರಹಾಕಿದ್ದಾರೆ. ಮುಂಗಾರು ಮಳೆ ತೀವ್ರ ಕೊರತೆಯಿಂದ ಕೃಷಿ ಬಿತ್ತನೆ ಕುಂಠಿತಗೊಂಡಿದೆ. ರೈತರು ಸಂಕಷ್ಟದಲ್ಲಿ ಸಿಲುಕಿದ್ದಾರೆ.

ಬರ ಘೋಷಣೆಗೆ ಅಗತ್ಯವಿರುವ ಎಲ್ಲ ಸೂಚ್ಯಂಕಗಳು ಸ್ಪಷ್ಟವಾಗಿದ್ದರೂ ಸರ್ಕಾರ ಇನ್ನೂ ನಿರ್ಧಾರ ಕೈಗೊಂಡಿಲ್ಲ. ಇಂತಹ ಗಂಭೀರ ಪರಿಸ್ಥಿತಿಯಲ್ಲೂ ರಾಜ್ಯಕ್ಕೆ ಪೂರ್ಣಾವಧಿ ಕೃಷಿ ಸಚಿವರೇ ಇಲ್ಲ. ರೈತರ ಬಗ್ಗೆ ಕಾಂಗ್ರೆಸ್ ಸರ್ಕಾರಕ್ಕಿರುವ ಕಾಳಜಿ ಇದೇನಾ? ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೇ, ರಾಜ್ಯದ ಜನತೆಗೆ ಉತ್ತರಿಸಿ ಎಂದು ಒತ್ತಾಯಿಸಿದ್ದಾರೆ.

ಕೃಷಿ ಕಾರ್ಮಿಕರ ವಲಸೆ ತಡೆಯಲು ರಾಜಕೀಯ ಬದಿಗಿಟ್ಟು ವಿಬಿ-ಜಿರಾಮ್‌ಜಿ ಯೋಜನೆಯನ್ನು ಸಮರೋಪಾದಿಯಲ್ಲಿ ಜಾರಿಗೆ ತರಲು ಏಕೆ ಮೀನಮೇಷ ಎಣಿಸುತ್ತಿದ್ದೀರಿ? ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗ ಸೃಷ್ಟಿಸುವ ಕಾಮಗಾರಿಗಳನ್ನು ತಕ್ಷಣ ಆರಂಭಿಸಲು ನಿಮ ಸರ್ಕಾರಕ್ಕೆ ಅಡ್ಡಿಯಾಗಿರುವುದು ಏನು? ಎಂದು ಅಶೋಕ್ ಪ್ರಶ್ನಿಸಿದ್ದಾರೆ.

## ಹೋಬಳಿ ಮಟ್ಟದ ಜನಸ್ಪಂದನ ಸಭೆ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯ ಎಲ್ಲಾ ರೈತಾಪಿ ವರ್ಗದವರಿಗೆ, ಸಾರ್ವಜನಿಕರಿಗೆ ಹಾಗೂ ಗ್ರಾಮೀಣ ಜನತೆಗೆ ಸಾಮಾಜಿಕ, ಶೈಕ್ಷಣಿಕ, ವಾಣಿಜ್ಯ ಹಾಗೂ ಕೃಷಿ ಚಟುವಟಿಕೆಗಳಿಗೆ ವಿವಿಧ ಇಲಾಖೆಗಳಲ್ಲಿ ದೊರೆಯಬೇಕಾದ ಸೌಲಭ್ಯಗಳು ನಿಗಧಿತ ಅವಧಿಯೊಳಗೆ ದೊರೆಯದೆ ಇದ್ದಾಗ ತಮ್ಮ ಅಹವಾಲನ್ನು ದಾಖಲಿಸಲು ಸರ್ಕಾರವು ಏಕೀಕೃತ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ಸಾರ್ವಜನಿಕರು ಅಹವಾಲುಗಳನ್ನು ಸಲ್ಲಿಸಲು ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಒಂದೆಡೆ ಇರುವುದರಿಂದ ಸಮಸ್ಯೆಗಳ ಪರಿಹಾರಕ್ಕಾಗಿ ನೇರವಾಗಿ ಅಹವಾಲುಗಳನ್ನು ದಾಖಲಿಸಲು ಹೋಬಳಿ ಮಟ್ಟದ ನಾಡಕಚೇರಿಯ ಕೇಂದ್ರ ಸ್ಥಾನದಲ್ಲಿ ಹಾಸನ ತಾಲ್ಲೂಕು, ದುದ್ದ ಹೋಬಳಿ, 2026 ರ ಜು.18, ಬೇಲೂರು ತಾಲ್ಲೂಕು, ಹಳೇಬೀಡು ಹೋಬಳಿ, ಆಗಸ್ಟ್ ಆ.17, ಸಕಲೇಶಪುರ ತಾಲ್ಲೂಕು, ಹೆತ್ತೂರು ಹೋಬಳಿಯಲ್ಲಿ ಸೆ.19, ಅರಕಲಗೂಡು ತಾಲ್ಲೂಕು, ಕೊಣನೂರು ಹೋಬಳಿ, ಅ.17, ಚನ್ನರಾಯಪಟ್ಟಣ ತಾಲ್ಲೂಕು, ಶ್ರವಣಬೆಳಗೊಳ ಹೋಬಳಿ, ನ.21, ಅರಸೀಕೆರೆ ತಾಲ್ಲೂಕು, ಬಾಣಾವರ ಹೋಬಳಿ ಡಿ.19 ರಂದು ಆಲೂರು ತಾಲ್ಲೂಕು, ಪಾಳ್ಯ ಹೋಬಳಿಯಲ್ಲಿ 2027 ರ ಜ.16 ರಂದು ಹೊಳೆನರಸೀಪುರ ತಾಲ್ಲೂಕು, ಹಳ್ಳಿಮೈಸೂರು ಹೋಬಳಿ, ಫೆ.20 ರಂದು ಜನಸ್ಪಂದನಾ ಕಾರ್ಯಕ್ರಮವನ್ನು ಆಯೋಜಿಸಿದ್ದು, ಸದರಿ ದಿನದಂದು ಸಾರ್ವಜನಿಕರು ಖುದ್ದು ಹಾಜರಾಗಿ ಅಹವಾಲನ್ನು ಸಲ್ಲಿಸಲು ತಿಳಿಸಿದ್ದಾರೆ.

# ಶಿಕ್ಷಣದಿಂದಮಾತ್ರ ಭೋವಿಸಮಾಜಬಲವರ್ಧನೆ

## ಶೀಘ್ರದಲ್ಲೇ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

• ಪ್ರಜೋದಯ ವರದಿ

**ಅರಸೀಕೆರೆ:** ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದಿರುವ ಭೋವಿ ಸಮಾಜವು ಬಲವರ್ಧನೆ ಆಗಬೇಕಾದರೆ ಶಿಕ್ಷಣದಿಂದ ಮಾತ್ರ ಸಾಧ್ಯ. ಈ ನಿಟ್ಟಿನಲ್ಲಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುವ ಜತೆಗೆ ಶಿಕ್ಷಣದ ಮಹತ್ವವನ್ನ ಹೇಳಿಕೊಡುವ ಕೆಲಸವನ್ನ ತಾಲ್ಲೂಕು ಭೋವಿ ಸಮಾಜ ಮಾಡಲು ಹೊರಟಿದೆ ಎಂದು ಭೋವಿ ಸಮಾಜದ ಕಾರ್ಯಾಧ್ಯಕ್ಷ ಹಾಗೂ ನಗರರಸಭೆ ಮಾಜಿ ಸದಸ್ಯ ಉಮಾಶಂಕರ್ ಅವರು ಹೇಳಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇ.85 ಫಲಿತಾಂಶದೊಂದಿಗೆ ಉತ್ತೀರ್ಣರಾಗಿರುವ ಸಮಾಜದ ವಿದ್ಯಾರ್ಥಿಗಳಿಗೆ ಭೋವಿ ಸಮಾಜದ ವತಿಯಿಂದ ಪ್ರತಿಭಾ ಪುರಸ್ಕಾರವನ್ನು ಹಮ್ಮಿಕೊಂಡಿದ್ದು ಪೋಷಕರು ಹಾಗೂ ಸಮಾಜದ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದುಕೊಳ್ಳುವ ಮೂಲಕ ಸಮುದಾಯದ ಇತರ ವಿದ್ಯಾರ್ಥಿಗಳಿಗೆ ಆದರ್ಶರಾಗುವಂತೆ ಕರೆ ನೀಡಿದರು.

ಪ್ರತಿಭಾ ಪುರಸ್ಕಾರಕ್ಕೆ ಭಾಜನರಾಗುವ ವಿದ್ಯಾರ್ಥಿಗಳು ಜಾತಿ ದೃಢೀಕರಣ ಪತ್ರ, ಎರಡು ಪೋಟೋ, ತೇರ್ಗಡೆಯಾಗಿರುವ ಎಸ್‌ಎಸ್‌ಎಲ್‌ಸಿ ಅಥವಾ ಪಿಯುಸಿ ಅಂಕಪಟ್ಟಿ ಜತೆಗೆ ಆಧಾರ್ ಕಾರ್ಡ್‌ನ್ನು 9845006931/9742447794/ ಅಥವಾ 9742498619 ವಾಟ್ಸಪ್ ನಂಬರಿಗೆ ಕಳಿಸಿ ಕೊಡುವಂತೆ ಅವರು ತಿಳಿಸಿದರು.

ಸಮಾಜದ ಮುಖಂಡ ನಾಗರಾಜ್ ಮಾತನಾಡಿ, ತಾಲ್ಲೂಕು ಭೋವಿ ಸಮಾಜದ ವತಿಯಿಂದ ಮೊದಲ ಬಾರಿಗೆ ಭೋವಿ ಸಮಾಜದ ಪ್ರತಿಭಾವಂತ ಮಕ್ಕಳನ್ನು ಗುರುತಿಸಿ ಪ್ರತಿಭಾ ಪುರಸ್ಕಾರ ಮಾಡಲು ಹೊರಟಿದ್ದು ಸಮಾಜದ ಬಂಧುಗಳು ಇದರ ಪ್ರಯೋಜನ ಪಡೆದುಕೊಳ್ಳುವ ಮೂಲಕ ಸಮಾಜದ ಸಂಘಟನೆಗೆ ಕೈಜೋಡಿಸುವಂತೆ ಮನವಿ ಮಾಡಿದರಲ್ಲದೆ, ಪ್ರತಿಭಾ ಪುರಸ್ಕಾರಕ್ಕೆ ಹೆಸರು ನೋಂದಾಯಿಸಿಕೊಳ್ಳಲು ಜುಲೈ 10 ಕೊನೆಯ ದಿನಾಂಕವಾಗಿದ್ದು, ಪ್ರತಿಭಾ ಪುರಸ್ಕಾರದ ದಿನಾಂಕವನ್ನು ಶೀಘ್ರದಲ್ಲಿ ಘೋಷಣೆ ಮಾಡಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಕಾಂತರಾಜ್, ಭೋವಿ ಸಮಾಜದ ಮುಖಂಡರಾದ ಪಡುವನಹಳ್ಳಿ ಶಿವಣ್ಣ, ಸಂಘದ ಖಜಾಂಚಿ ಲೋಹಿತ್ ಇನ್ನಿತರರು ಉಪಸ್ಥಿತರಿದ್ದರು.

## ವಿಧ್ವಂಸಕ ಕೃತ್ಯಕ್ಕೆ ಸಂಚು: ನಾಲ್ವರು ಉಗ್ರರ ಬಂಧನ

**ಹೊಸದೆಹಲಿ:** ರಾಷ್ಟ್ರ ರಾಜಧಾನಿ ಹೊಸ ದೆಹಲಿಯಲ್ಲಿ ಭಾರಿ ಪ್ರಮಾಣದ ಭಯೋತ್ಪಾದಕ ದಾಳಿ ನಡೆಸಲು ಸಂಚು ರೂಪಿಸಿದ್ದ ಪಾಕಿಸ್ತಾನದ ಗುಪ್ತಚರ ಸಂಸ್ಥೆ ಬೆಂಬಲಿತ ಅಂತರ-ರಾಜ್ಯ ಭಯೋತ್ಪಾದನೆ ಮತ್ತು ಶಸ್ತ್ರಾಸ್ತ್ರ ಜಾಲವನ್ನು ದೆಹಲಿ ಪೊಲೀಸರ ವಿಶೇಷ ಘಟಕ ಯಶಸ್ವಿಯಾಗಿ ಭೇದಿಸಿದೆ. ಕಾರ್ಯಾಚರಣೆಯಲ್ಲಿ ಪಂಜಾಬ್ ಮೂಲದ ನಾಲ್ವರು ಶಂಕಿತ ಉಗ್ರರನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ.

ಬಂಧಿತರಿಂದ ಅತ್ಯಾಧುನಿಕ ವಿದೇಶಿ ನಿರ್ಮಿತ ಜಿಗಾನಾ ಪಿಸ್ತೂಲ್ ಮತ್ತು ಒಂದು .30 ಬೋರ್ ಪಿಸ್ತೂಲ್ ಸೇರಿದಂತೆ 2 ಮಾರಕಾಸ್ತ್ರಗಳು, 9 ಜೀವಂತ ಗುಂಡುಗಳು ಹಾಗೂ 5 ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆಯಿಂದ ತಪ್ಪಿಸಿಕೊಳ್ಳಲು ಆರೋಪಿಗಳು ತಮ್ಮ ಪಾಕಿಸ್ತಾನಿ ಹ್ಯಾಂಡ್ಲರ್‌ಗಳು ಒದಗಿಸಿದ್ದ ವಿದೇಶಿ ಮೊಬೈಲ್ ಸಂಖ್ಯೆಗಳ ಮೂಲಕ ಸಂಪರ್ಕದಲ್ಲಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

# ನೀರನ್ನು ಮಿತವಾಗಿ ಬಳಸಿ: ರತ್ನಾಕರ ಕೊಠಾರಿ



• ಪ್ರಜೋದಯ ವರದಿ

**ಆಲೂರು:** ನೀರನ್ನು ಮಿತಿಯಾಗಿ ಬಳಸುವುದರೊಂದಿಗೆ ಉಳಿತಾಯ ಮಾಡದಿದ್ದರೆ, ಭವಿಷ್ಯದ ದಿನಗಳಲ್ಲಿ ಕುಡಿಯುವ ನೀರಿಗೆ ಹಾಹಾಕಾರ ತಲೆದೋರುತ್ತದೆ ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ತಾಲ್ಲೂಕು ಯೋಜನಾಧಿಕಾರಿ ರತ್ನಾಕರ ಕೊಠಾರಿ ತಿಳಿಸಿದರು.

ಪಾಳ್ಯ ವಲಯದ ಆಲೂರು ಕಾರ್ಯಕ್ಷೇತ್ರದ ಜ್ಞಾನವಿಕಾಸ ಕಾರ್ಯಕ್ರಮದ ಅಡಿಯಲ್ಲಿ ತೊರಗರವಳ್ಳಿ ಗ್ರಾಮದಲ್ಲಿ ಏರ್ಪಡಿಸಿದ್ದ ಬೀದಿ ನಾಟಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಸ್ತುತ ವರ್ಷ ಹವಾಮಾನ ಮುನ್ಸೂಚನೆಯಂತೆ ಮಳೆ ಪ್ರಮಾಣ ಕಡಿಮೆ ಎಂಬ ವರದಿ ಇದೆ. ಕಳೆದ ವರ್ಷ ಈ ವೇಳೆಗೆ ಸಾಕಷ್ಟು ಮಳೆಯಾಗಿ ಕೃಷಿ ಚಟುವಟಿಕೆಗಳು ಭರದಿಂದ ಸಾಗಿದ್ದವು. ಈಗಾಗಲೆ ಕೆರೆ -ಕಟ್ಟೆಗಳಲ್ಲಿ ನೀರು ಕಡಿಮೆಯಾಗಿದೆ. ಕೊಳವೆ ಬಾವಿಯಲ್ಲಿ ನೀರಿನ ಪ್ರಮಾಣ ಕುಗ್ಗುತ್ತಿದೆ ಎಂದರು.

ಅಡುಗೆ- ಶೌಚ ಮನೆಯಲ್ಲಿ ಬಳಸಿ ಹೊರಸೂಸುವ ನೀರನ್ನು ತರಕಾರಿ ಇನ್ನಿತರೆ ಬೆಳೆ ಬೆಳೆಯಲು ಬಳಸಿಕೊಳ್ಳಬೇಕು. ಶೀತ ವಾತಾವರಣ ಇರುವುದರಿಂದ ಮನೆ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡು ಆರೋಗ್ಯವಂತರಾಗಿ ಬದುಕಬೇಕು ಎಂದರು.

ಜ್ಞಾನವಿಕಾಸ ಸಮನ್ವಯಅಧಿಕಾರಿ ಸರಸ್ವತಿ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಜನಸಾಮಾನ್ಯರು ಆರ್ಥಿಕವಾಗಿ ಸದೃಢವಾಗುವಂತಹ ಹಲವು ಯೋಜನೆಗಳಿವೆ. ಯೋಜನೆಗಳನ್ನು ಪಡೆದುಕೊಂಡು ಉತ್ತಮ ಜೀವನ ಸಾಗಿಸಬೇಕು ಎಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕುಮಾರ್ ತಂಡದ ಕಲಾವಿದರಿಂದ ನೀರು ಉಳಿಸಿ, ಬಾಲ್ಯ ವಿವಾಹ, ಶಿಕ್ಷಣ, ಮೊಬೈಲ್ ಬಳಕೆ, ಶೌಚಾಲಯ ಬಳಕೆ, ಸುಜ್ಞಾನ ನಿಧಿ, ವಾತ್ಸಲ್ಯ ಮತ್ತು ಸಿಎಸ್‌ಸಿ ಕಾರ್ಯಕ್ರಮ, ಮೂಢನಂಬಿಕೆ, ಯೂಟ್ಯೂಬ್ ಚಾನೆಲ್ ಸಬ್‌ಸ್ಕ್ರೈಬ್ ಬಗ್ಗೆ ಯೋಜನೆ ಕುರಿತು ವಿಶೇಷವಾಗಿ ಹಾಡು ನೃತ್ಯದ ಮೂಲಕ ಪ್ರದರ್ಶನ ಮಾಡಿದರು.

ಕಾಳೆಗೌಡ, ಜ್ಞಾನವಿಕಾಸ ಸಮನ್ವಯ ಅಧಿಕಾರಿ ಸರಸ್ವತಿ, ಸೇವಾ ಪ್ರತಿನಿಧಿ ಭವಾನಿ, ಸಂಘದ ಸದಸ್ಯರು, ಕೇಂದ್ರದ ಸದಸ್ಯರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಸೆನ್ಸಾರ್ ಮಂಡಳಿಯ ನಿರ್ದೇಶಕ ನಂಜುಂಡ ಮೈಮ್ ಒತ್ತಾಯ

# ವೃತ್ತಗಳಲ್ಲಿ ಪುತ್ಥಳಿ ಪ್ರತಿಷ್ಠಾಪನೆಗೆ ಅವಕಾಶ ಬೇಡ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಪಟ್ಟಣದ ವೃತ್ತಗಳಲ್ಲಿ ಪುತ್ಥಳಿ (ಪ್ರತಿಮೆ) ಪ್ರತಿಷ್ಠಾಪನೆ ಮಾಡಲು ಅವಕಾಶ ನೀಡಬಾರದು ಎಂದು ಕನ್ನಡ ಚಲನಚಿತ್ರ ಸೆನ್ಸಾರ್ ಮಂಡಳಿಯ ನಿರ್ದೇಶಕ ನಂಜುಂಡ ಮೈಮ್ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ಇತ್ತೀಚೆಗೆ ಪಟ್ಟಣದ ಪ್ರಮುಖ ಸರ್ಕಲ್‌ಗಳಲ್ಲಿ ಜನಪ್ರಿಯ ನಾಯಕರುಗಳ ಪ್ರತಿಮೆ, ಪುತ್ಥಳಿ ನಿರ್ಮಾಣ ಮಾಡುವ ಅಭಿಮಾನಿಗಳ ಸಮೂಹ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಇದಕ್ಕೆ ಕಡಿವಾಣ ಹಾಕಬೇಕು ಎಂದರು.

ಪಟ್ಟಣದ ಕೆ.ಆರ್.ವೃತ್ತದಲ್ಲಿ ಕೃಷ್ಣರಾಜೇಂದ್ರ ಅವರ ಪುತ್ತಳಿ, ಆಸ್ಪತ್ರೆ ವೃತ್ತದಲ್ಲಿ ಶ್ರೀಕಂಠಯ್ಯನವರ ಪುತ್ತಳಿ, ರಾಷ್ಟ್ರಕವಿ ಕುವೆಂಪು ಅವರ ಪಾರ್ಥಿವ ಶರೀರ ಮೈಸೂರು ವೃತ್ತದಲ್ಲಿ ನಿಂತಿತ್ತು, ಅದರ ಸವಿನೆನಪಿಗಾಗಿ ಕುವೆಂಪುರವರ ಪ್ರತಿಮೆ ನಿರ್ಮಾಣಕ್ಕೆ ಸಾಹಿತ್ಯಾಸಕ್ತರು ಮುಂದಾಗಿದ್ದಾರೆ. ಗದ್ದೆ ಹಳ್ಳದಿಂದ ರೈಲ್ವೆ ನಿಲ್ದಾಣಕ್ಕೆ ಹೋಗುವ ವೃತದಲ್ಲಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಪುತ್ಥಳಿ ನಿರ್ಮಾಣಕ್ಕೂ ಅಭಿಮಾನಿಗಳು ಉತ್ಸುಕರಾಗಿದ್ದಾರೆ ಎಂದು ತಿಳಿಸಿದರು.

ಪಟ್ಟಣದ ಗುರುಭವನದ ಬಳಿ ಕೆಂಪೇಗೌಡರ ವೃತ್ತದಲ್ಲಿ ಅಶ್ವರೂಢ ಕೆಂಪೇಗೌಡರ ಪ್ರತಿಮೆ ಸ್ಥಾಪನೆಗೆ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿಯ ಸಭೆಯಲ್ಲಿ ಶಾಸಕರು ಸಾರ್ವಜನಿಕರು ಹಾಗೂ ಸಂಘ- ಸಂಸ್ಥೆಗಳ ಅಭಿಪ್ರಾಯ ಸಂಗ್ರಹಿಸಲು ಜುಲೈ 5 ರಂದು ನವೋದಯ ವಿದ್ಯಾ ಸಂಸ್ಥೆಯ ಸಭಾಂಗಣದಲ್ಲಿ ಸಭೆ ಕರೆದಿದ್ದಾರೆ. ಹಾಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಪುತ್ತಳಿ ನಿರ್ಮಾಣಕ್ಕೂ ಅವರ ಅಭಿಮಾನಿ ಗಳು ತಯಾರಿಯಲ್ಲಿದ್ದು, ಪಟ್ಟಣದ ಎಲ್ಲಾ ಪ್ರಮುಖ ವೃತ್ತಗಳಲ್ಲೂ ಪ್ರತಿಮೆ ಪುತ್ಥಳಿಗಳನ್ನು ಸ್ಥಾಪಿಸುವುದರಿಂದ ಸಮಾಜ ವಿರೋಧಿ ಶಕ್ತಿಗಳು ಸಮಾಜದಲ್ಲಿ ಗಲಭೆ, ಅಶಾಂತಿ, ಸಾಮರಸ್ಯದಲ್ಲಿ ಒಡಕು ಮೂಡಿಸುವ ವಿಚಿತ್ರಕಾರಿ ಮನಸ್ಸಿನವರಿಗೆ ಅವಕಾಶ ಸಿಗಲಿದೆ ಎಂದರು.

ಒಬ್ಬರ ಮೇಲೊಬ್ಬರನ್ನು ಎತ್ತಿ ಕಟ್ಟಿ ಜಾತಿ-ಜಾತಿಗಳ ನಡುವೆ ವಿಷ ಬೀಜಗಳನ್ನು ಬಿತ್ತಲು, ಪುತ್ಥಳಿ ಪ್ರತಿಮೆಗಳ ಮೇಲೆ ಮಸಿ, ಹಾರಗಳನ್ನು ಹಾಕಿ ಅಪಮಾನ ಮಾಡಿದರೆ, ಯಾರು ಹೊಣೆಗಾರರು ಯಾರು? ಕೋಮು ಸೌಹಾರ್ದತೆಗೆ ಧಕ್ಕೆ ಬರುವ ಅಥವಾ ಗುಂಪು-ಘರ್ಷಣೆಗಳು ನಡೆಯುವ ಸಾಧ್ಯತೆಯಿದ್ದು, ಪ್ರತಿಮೆಗಳನ್ನು ರಕ್ಷಣೆ ಮಾಡುವವರು ಯಾರು ಎಂದು ಪ್ರಶ್ನಿಸಿದರು.

ಪುತ್ಥಳಿಗಳನ್ನು ಸ್ಥಾಪಿಸುವುದೇ ಆದರೆ ತಾಲ್ಲೂಕು ಕಚೇರಿ ಆವರಣದಲ್ಲಿ ನಿರ್ಮಾಣ ಮಾಡಲಿ, ಪೊಲೀಸ್ ಸುರಕ್ಷತೆ, ಸಿಸಿಟಿವಿ ಕಣ್ಗಾವಲಿನಲ್ಲಿ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಇರುತ್ತದೆ. ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಪುತ್ಥಳಿಗಳ ನಿರ್ಮಾಣಕ್ಕೆ ಸಂಬಂಧಪಟ್ಟಂತೆ ಪೊಲೀಸ್ ಇಲಾಖೆ, ಜಿಲ್ಲಾಡಳಿತ ಹಾಗೂ ತಾಲ್ಲೂಕು ಆಡಳಿತ ಪ್ರತಿಮೆಗಳ ನಿರ್ಮಾಣಕ್ಕೆ ಅವಕಾಶ ನೀಡದೆ ತಾಲ್ಲೂಕು ಕಚೇರಿ ಆವರಣದಲ್ಲಿ ಮಾತ್ರ ಪ್ರತಿಮೆಗಳ ನಿರ್ಮಾಣಕ್ಕೆ ಅವಕಾಶ ನೀಡಬೇಕೆಂದು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಪರಮ ಗಂಗಾಧರ್, ಮಣಿಕಂಠ, ಪ್ರಶಾಂತ್, ಸಿ.ಜಿ.ಕುಮಾರ್, ಗನ್ನಿ ವಿಶ್ವನಾಥ್ ಹಾಜರಿದ್ದರು.

## ಭಾರತ -ಇಂಗ್ಲೆಂಡ್ ಮೊದಲ ಟಿ 20 ಮಳೆಗಾಹುತಿ

• ಪ್ರಜೋದಯ ವರದಿ

**ಚೆಸ್ಟರ್ ಲೇ ಸ್ಟ್ರೀಟ್:** ಇಲ್ಲಿ ಬುಧವಾರ ರಾತ್ರಿ ನಡೆದ ಭಾರತ ಮತ್ತು ಇಂಗ್ಲೆಂಡ್ ನಡುವಿನ 5 ಪಂದ್ಯಗಳ ಟಿ 20 ಕ್ರಿಕೆಟ್ ಸರಣಿಯ ಮೊದಲ ರೋಚಕ ಪಂದ್ಯವು ಮಳೆಯಿಂದಾಗಿ ರದ್ದಾಯಿತು.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಭಾರತ, ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 189 ರನ್ ಗಳಿಸಿತು.

ನಾಯಕ ಶ್ರೇಯಸ್ ಅಯ್ಯರ್ 68 ರನ್, ಅಭಿಷೇಕ್ ಶರ್ಮಾ 59 ರನ್, ಶಿವಂ ದುಬೆ 42 ರನ್ ಗಳಿಸಿದರು. ಇಂಗ್ಲೆಂಡ್ ಪರ ಸಾಕಿಬ್ ಮಹಮೂದ್ 3 ವಿಕೆಟ್ ಪಡೆದರು. ಮಳೆಯಿಂದಾಗಿ ಪಂದ್ಯ ಸ್ಥಗಿತಗೊಂಡ ಕಾರಣ ಆತಿಥೇಯ ಇಂಗ್ಲೆಂಡ್ ಎರಡನೇ ಇನಿಂಗ್ಸ್ ನಲ್ಲಿ ಬ್ಯಾಟಿಂಗ್ ಮಾಡಲು ಅವಕಾಶ ಸಿಗಲಿಲ್ಲ.

ಹೀಗಾಗಿ ಪಂದ್ಯವನ್ನು ಅರ್ಧಕ್ಕೇ ರದ್ದುಗೊಳಿಸಲಾಯಿತು. ಎರಡೂ ತಂಡ ಗಳು ಇದೇ ಶನಿವಾರ ಮ್ಯಾಂಚೆಸ್ಟರ್‌ನಲ್ಲಿ ಎರಡನೇ ಟಿ 20 ಪಂದ್ಯದಲ್ಲಿ ಪರಸ್ಪರ ಮುಖಾಮುಖಿಯಾಗಲಿವೆ.

**ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ದಬ್ಬೆ ಬೇಲೂರು ತಾಲ್ಲೂಕು**

**ಟೆಂಡರ್ ಪ್ರಕಟಣೆ**

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ದಬ್ಬೆ ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರ ವತಿಯಿಂದ ಸಂಘದ 1ನೇ ಹಂತಸ್ತಿನ ಶೀಟಿನ ಕಟ್ಟಡ ನಿರ್ಮಾಣ ಮಾಡಲು ಟೆಂಡರ್ ಕರೆಯಲಾಗಿದೆ.

**: : ಷರತ್ತುಗಳು : :**

ಟೆಂಡರ್ ಅರ್ಜಿ ಪಡೆಯಲು ದಿನಾಂಕ: 03-07-2026 ರಿಂದ ದಿನಾಂಕ: 08-07-2026 ರ ವರೆಗೆ ಪಡೆಯಬಹುದು. ಅರ್ಜಿ ಶುಲ್ಕ 1000 ರೂ. ಅರ್ಜಿ ಶುಲ್ಕ ಹಿಂದಿರುಗಿಸುವುದಿಲ್ಲ.ಮತ್ತು ಪಡೆದ ಟೆಂಡರ್ ಅರ್ಜಿಗಳನ್ನು ಹಿಂದಿರುಗಿಸಲು ಕೊನೆಯ ದಿನಾಂಕ 10-07-2026 ಬೆಳಗ್ಗೆ 11.00 ಗಂಟೆಗೆ ಈ.ಎಂ.ಡಿ. ಮೊತ್ತ 50,000 (ಐವತ್ತು ಸಾವಿರ) ಅದೇ ದಿನ ಸಂಜೆ 4 ಗಂಟೆಗೆ ಟೆಂಡರ್ ತೆರೆಯಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಂಘದ ಕಛೇರಿಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು.

**1 ನೇ ಅಂತಸ್ತಿನ ಶೀಟಿನ ಕಟ್ಟಡ**

ಸಹಿ
ಅಧ್ಯಕ್ಷರು /ಸಿ.ಇ.ಓ.

